ಸಂಪುಟ : 9 ಸಂಚಿಕೆ 280 ಪುಟ : 4 ಬೆಲೆ: 3.00 ಗುರುವಾರ ಡಿಸೆಂಬರ್ 19 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 280 Pages : 4 Price : 3.00 Thursday December 19 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25






## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್-19 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 29 – ಟೀಚರ್ಸ್ ಕಾಲೋನಿ, ಪೂರ್ತಿ ಭಾಗಗಳು, ರಾಜೀವ ಗಾಂಧಿ ನಗರದ ಮೇಲಿನ ಭಾಗ, ಚಂದಾವರಿ ಸರ್ ಲೈನ್, ಡಂಬಳದವರ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 22 – ಗಂಗಿಮಡಿ, ಅಮರೇಶ್ವರ ನಗರ, ರಾಜೋತೇಶ್ವರ ನಗರ, ಗ್ವಾಡಿಯವರ ಲೈನ್, ಸರ್ವೋದಯ ಕಾಲೋನಿ, 8 ನಂ. ಶಾಲೆ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 20, 21 – ಬೇವಿನ ಮರದಮ್ಮ, ಶರೀಫಜ್ಜನ ಗದ್ದುಗೆ, ಗೌಳಿಯವರ ಲೈನ್, ಕೊಟ್ಟೂರ ಅವರ ಲೈನ್, ಹುಲಿಗೆಮ್ಮನ ಗುಡಿ, ಚಿನ್ನೂರ ಅವರ ಲೈನ್, ಪಡಗದ ಭಾಗ -1,2 ಉಳಿದ ಕೆಲವು ಭಾಗಗಳು. ವಾರ್ಡ್ ನಂ. 4 – ಗೌರಿ ಗುಡಿ, ಬ್ಯಾಳಿಯವರ ಲೈನ್, ಬಿಎಸ್ ಎನ್ ಎಲ್ ಆಫೀಸ್ ಪೂರ್ತಿ ಭಾಗಗಳು, ಕಣವಿ ಪ್ಲಾಟ್ ಪೂರ್ತಿ ಭಾಗಗಳು, 200 ಮನೆ, 270 ಮನೆಗಳ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 – ತಟ್ಟಿಯವರ ಲೈನ್, ಮಾಕಾಪುರ ಲೈನ್ ಉಳಿದ ಕೆಲವು ಭಾಗಗಳು.

ಪ್ರಕಟಣೆ: ಗದಗ-ಬೆಟಗೇರಿ ಅವಳಿನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತಮ್ಮ ನೀರಿನ ಕರವನ್ನು ತುಂಬಲು ನಗರಸಭೆ ಪ್ರಕಟಣೆಯ ಮೂಲಕ ತಿಳಿಸಿದೆ. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ್ ತುಂಬದೇ ಹೋದರೆ, ನಳಗಳನ್ನು ಬಂದ ಮಾಡಲಾಗುತ್ತದೆ. ಆದ ಕಾರಣ ನೀರಿನ ಕರವನ್ನು ತುಂಬಲು ಸಾರ್ವಜನಿಕರಿಗೆ ತಿಳಿಸಲಾಗಿದೆ.

## ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಗದಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಡಿ. 20ರಂದು ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರದಿಂದ ಪೂರೈಕೆಯಾಗುವ ಜಿಮ್ಸ್ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿ.ಪಿ-ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿ ಎಲ್ 1 ಮತ್ತು 2, 33 ಕೆವಿ ಉಪಕೇಂದ್ರ-ಹುಲಕೋಟಿ, ಲಕ್ಕುಂಡಿ, ಕೆ.ಎಚ್.ಬಿ ಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ, ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ವಿನಂತಿಸಿದೆ.

### 15 ದಿನದಲ್ಲಿ ದಾಖಲೆಯ 35,28,492 ರೂ. ತೆರಿಗೆ ಸಂಗ್ರಹಣೆ | ಗ್ರಾಮದ ಕರ ವಸೂಲಿಕಾರರಿಗೆ ಸನ್ಮಾನ, ಜೊತೆಗೆ ಪ್ರಶಂಸನಾ ಪತ್ರ ವಿತರಣೆ

# ತೆರಿಗೆ ವಸೂಲಿ ಅಭಿಯಾನದಲ್ಲಿ ರೋಣ ತಾ.ಪಂ ದಾಖಲೆ

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನಾದ್ಯಂತ ಡಿ.1ರಿಂದ ಡಿ.30ರವರೆಗೆ ಕರ ವಸೂಲಿ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಕೇವಲ 15 ದಿನಗಳಲ್ಲಿ ತಾಲೂಕಿನ 22 ಗ್ರಾಮ ಪಂಚಾಯಿತಿಗಳಲ್ಲಿ ಒಟ್ಟು 35,28,492ಕ್ಕೂ ಅಧಿಕ ತೆರಿಗೆ ಸಂಗ್ರಹಣೆಯೊಂದಿಗೆ ರೋಣ ತಾ.ಪಂ ತೆರಿಗೆ ವಸೂಲಿ ಅಭಿಯಾನದಲ್ಲಿ ಮಹತ್ವದ ಹೆಜ್ಜೆ ಇಟ್ಟು ಅಧಿಕಾರಿ ವರ್ಗಗಳಿಂದ ಪ್ರಶಂಸೆಗೆ ಪಾತ್ರವಾಗಿದೆ. ರೋಣ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ತಾಲೂಕಿನಲ್ಲಿ ತೆರಿಗೆ ವಸೂಲಿ ಪ್ರಮಾಣ ಕಡಿಮೆ ಇರುವದನ್ನು ಗುರುತಿಸಿ ಎಲ್ಲಾ ಗ್ರಾಮ ಪಂಚಾಯಿತಿಗೂ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಕರ ವಸೂಲಿಕಾರರಿಗೆ ತಾಲೂಕಿನಲ್ಲಿ ಒಂದು ತಿಂಗಳ ಕಾಲ ವಿಶೇಷ ಅಭಿಯಾನ ಹಮ್ಮಿಕೊಂಡಿದ್ದರು. 22 ಗ್ರಾ.ಪಂಗಳಲ್ಲಿ 15 ದಿನದಲ್ಲಿ ಹೆಚ್ಚು ತೆರಿಗೆ ವಸೂಲಿ ಮಾಡಿದ 5 ಜನ ಕರ ವಸೂಲಿಗಾರರಿಗೆ, 1 ಲಕ್ಷಕ್ಕೂ ಹೆಚ್ಚು ಪ್ರಗತಿ ಸಾಧಿಸಿದ ಕರ ವಸೂಲಿಕಾರರಿಗೆ ಹಾಗೂ ಜಿಲ್ಲಾ ಪಂಚಾಯತ ವತಿಯಿಂದ ನಡೆಸಿದ ವಿಶೇಷ ಅಭಿಯಾನದಲ್ಲಿ ಹೆಚ್ಚು ಪ್ರಗತಿ ಸಾಧಿಸಿದ 5 ಜನ ಕರ ವಸೂಲಿಕಾರರಿಗೆ ತಾ.ಪಂ ಸಭಾಂಗಣದಲ್ಲಿ ಸನ್ಮಾನದ ಜೊತೆಗೆ ಪ್ರಶಂಸನಾ ಪತ್ರ ವಿತರಣೆ ಮಾಡಲಾಯಿತು.

4ನೇ ಪುಟಕ್ಕೆ




### ಅಭಿಯಾನದ ವಿಶೇಷತೆ

22 ಗ್ರಾಮ ವ್ಯಾಪ್ತಿಯಲ್ಲಿ ಅತಿ ಹೆಚ್ಚು ತೆರಿಗೆ ಬಾಕಿ ಉಳಿಸಿಕೊಂಡಿರುವ ಕನಿಷ್ಠ 200 ಆಸ್ತಿ ಮಾಲೀಕರನ್ನು ಗುರುತಿಸಿ ಅವರಿಗೆ ನೋಟೀಸ್ ನೀಡಿ ತೆರಿಗೆ ವಸೂಲಿ ಮಾಡಬೇಕು. ತೆರಿಗೆ ಪಾತಿಸದೇ ಬಾಕಿ ಉಳಿಸಿಕೊಂಡಿರುವ ಮೊಬೈಲ್ ಟವರ್ ಕಂಪನಿಗಳಿಗೆ ನೋಟೀಸ್ ಜಾರಿ ಮಾಡಿ ಸಂಪೂರ್ಣ ಮೊತ್ತ ಪಾವತಿಸಿಕೊಳ್ಳುವುದು, ತೆರಿಗೆ ಪಾವತಿ ಬಾಕಿ ಹೊಂದಿರುವ ಅಂಗಡಿ ಮಾಲೀಕರು, ಉದ್ದಿಮೆದಾರರು, ಸರ್ಕಾರಿ ನೌಕರರಿಗೆ ನೋಟೀಸ್ ನೀಡಿ ಬಾಕಿ ವಸೂಲಿ ಮಾಡಲು ಸೂಚಿಸಲಾಗಿತ್ತು. ಅದರಂತೆ ಕೇವಲ 15 ದಿನದಲ್ಲಿ ದಾಖಲೆಯ ಕರ ವಸೂಲಿ ಮಾಡಲಾಗಿದೆ.

### 15 ದಿನದ ತೆರಿಗೆ ಸಂಗ್ರಹಣೆ ವಿವರ

ಹೊಳೆಆಲೂರ-696188 ರೂ, ಕುರಹಟ್ಟಿ-273356 ರೂ, ಕೊತಬಾಳ-246878 ರೂ, ಮೆಣಸಗಿ-196622 ರೂ, ಮಲ್ಲಾಪೂರ-185104 ರೂ, ಹಿರೇಹಾಳ-177511 ರೂ, ಅಸೂಟಿ-167253 ರೂ, ಜಕ್ಕಲಿ-163627 ರೂ, ಚಿಕ್ಕಮಣ್ಣೂರ-144644 ರೂ, ಹೊಳೆಮಣ್ಣೂರ-143480 ರೂ, ಅಬ್ಬಿಗೇರಿ- 137240 ರೂ, ಹುಲ್ಲೂರ-129320 ರೂ, ಕುರಡಗಿ-125768 ರೂ, ಬೆಳವಣಕಿ-125558 ರೂ, ಯಾವಗಲ್-124859 ರೂ, ಹುನಗುಂಡಿ-110674 ರೂ, ಸವಡಿ-100316 ರೂ, ಡ.ಸ.ಹಡಗಲಿ – 70877 ರೂ, ಅಮರಗೋಳ-70737 ರೂ, ಹೊಸಳ್ಳಿ-53841 ರೂ, ಕೌಜಗೇರಿ-51234 ರೂ, ಮಾಡಲಗೇರಿ-33405 ರೂ ಹೀಗೆ ಒಟ್ಟು 35,28,492 ರೂ ಕರ ಸಂಗ್ರಹಿಸಲಾಗಿದೆ.

ಕಾರ್ಯ ನಿರ್ವಾಹಕ ಅಧಿಕಾರಿಗಳು ಒಂದು ತಿಂಗಳ ಕಾಲ ಕರ ವಸೂಲಿ ಅಭಿಯಾನ ಹಮ್ಮಿಕೊಳ್ಳಲು ಸೂಚನೆ ನೀಡಿದ್ದರು. ಅದರಂತೆ ಗ್ರಾಮದ ಆಡಳಿತ ಮಂಡಳಿ ಜೊತೆಗೆ ಚರ್ಚಿಸಿ ತೆರಿಗೆ ವಸೂಲಿ ಮಾಡಲು ಕರ ವಸೂಲಿಕಾರರ ಜೊತೆಗೂಡಿ ನಾವು ಕೆಲಸ ಮಾಡಿದ್ದೇವೆ. ಕರ ವಸೂಲಿಕಾರರು ಉತ್ತಮ ಕೆಲಸ ಮಾಡಿದ ಕಾರಣ ನಮ್ಮ ಗ್ರಾಮ ಪಂಚಾಯಿತಿ ಮೊದಲ ಸ್ಥಾನ ಪಡೆದಿದ್ದು ಖುಷಿಯ ವಿಚಾರ.

**– ಬಸವರಾಜ ಗಿರಿತಮ್ಮನ್ನವರ. ಪಂಚಾಯತ ಅಭಿವೃದ್ಧಿ ಅಧಿಕಾರಿ, ಹೊಳೆ ಆಲೂರ.**

ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಸಲಹೆ ಸೂಚನೆ ಮೇರೆಗೆ ಗ್ರಾ.ಪಂನಲ್ಲಿ ತೆರಿಗೆ ವಸೂಲಿ ಮಾಡಲು ಕೈಗೊಳ್ಳಬಹುದಾದ ಕ್ರಮಗಳ ಕುರಿತು ಸಿಬ್ಬಂದಿಗಳ ಜೊತೆಗೆ ಚರ್ಚಿಸಿ ತಿಂಗಳ ಕಾಲ ಅಭಿಯಾನ ಹಮ್ಮಿಕೊಂಡಿದ್ದೇವೆ. ಆದರೆ 15 ದಿನದಲ್ಲಿ ಇಷ್ಟು ತೆರಿಗೆ ಸಂಗ್ರಹವಾಗಿದ್ದು ಉತ್ತಮ ಬೆಳವಣಿಗೆ. ಮುಂದಿನ 15 ದಿನಗಳಲ್ಲಿ ಇನ್ನೂ ಹೆಚ್ಚಿನ ತೆರಿಗೆ ವಸೂಲಿ ಮಾಡಲು ಸೂಚನೆ ನೀಡಿದ್ದೇವೆ.

**– ಚಂದ್ರಶೇಖರ ಬಿ.ಕಂದಕೂರ. ಕಾರ್ಯ ನಿರ್ವಾಹಕ ಅಧಿಕಾರಿಗಳು, ತಾ.ಪಂ ರೋಣ.**

### ಬೆಳಗಾವಿ ಅಧಿವೇಶನದಲ್ಲಿ ಸಚಿವ ಬಿ.ಝಡ್. ಜಮೀರ್ ಅಹಮದ್ ಖಾನ್ ಸ್ಪಷ್ಟನೆ

# ವಕ್ಫ್ ಆಸ್ತಿ ವಿಚಾರದಲ್ಲಿ ರಾಜಕೀಯ ಸಲ್ಲದು

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ದೇವಸ್ಥಾನ ಹಾಗೂ ರೈತರ ಜಮೀನುಗಳನ್ನು ವಕ್ಫ್‌ಗೆ ಸೇರ್ಪಡೆ ಮಾಡುವುದಿಲ್ಲ. ಒಂದು ವೇಳೆ ವಕ್ಫ್ ಆಸ್ತಿ ಸಂಬಂಧವಾಗಿ ನೋಟಿಸ್ ನೀಡಿದ್ದರೆ, ಆ ನೋಟಿಸ್‌ಗಳನ್ನು ಹಿಂಪಡೆಯುವುದಾಗಿ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಬಿ.ಝಡ್. ಜಮೀರ್ ಅಹಮದ್ ಖಾನ್ ಸ್ಪಷ್ಟಪಡಿಸಿದರು.

ಬೆಳಗಾವಿ ಸುವರ್ಣಸೌಧದಲ್ಲಿ ನಡೆಯುತ್ತಿರುವ ಅಧಿವೇಶನದಲ್ಲಿ ವಿರೋಧ ಪಕ್ಷದ ನಾಯಕರು ನಿಯಮ 69 ಅಡಿ, ರೈತರ ಜಮೀನು, ಮಠ-ಮಂದಿರ ಜಾಗ, ಸಾರ್ವಜನಿಕರ ಆಸ್ತಿ, ಸರ್ಕಾರಿ ಕಟ್ಟಡಗಳ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದು ಮಾಡಿರುವ ಕುರಿತು ಪ್ರಸ್ತಾಪಿಸಿದ್ದ ವಿಚಾರಗಳಿಗೆ ಬುಧವಾರ ವಿಧಾನಸಭೆಯ ಕಲಾಪದಲ್ಲಿ ಸಚಿವ ಜಮೀರ್ ಅಹಮದ್ ಖಾನ್ ಉತ್ತರಿಸಿದರು.

ಒಂದು ವೇಳೆ ವಕ್ಫ್ ಜಾಗದಲ್ಲಿಯೇ



ದೇವಸ್ಥಾನ ನಿರ್ಮಿಸಿದ್ದರೂ ಕೂಡ, ಸರ್ಕಾರ ಅದನ್ನು ಮುಟ್ಟುವುದಿಲ್ಲ. ಬದಲಿಗೆ ದೇವಸ್ಥಾನಕ್ಕೆ ಮರಳಿ ಆ ಜಾಗವನ್ನು ನೀಡಲಾಗುವುದು. ರೈತರು ಉಳುಮೆ ಮಾಡುತ್ತಿರುವ ಜಮೀನುಗಳನ್ನು ಸಹ ವಕ್ಫ್ ಸೇರ್ಪಡೆ ಮಾಡುವುದಿಲ್ಲ. ವಕ್ಫ್ ತಿದ್ದುಪಡಿ ಕಾಯ್ದೆ ಹಾಗೂ ಸರ್ವೋಚ್ಚ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಕಳೆದ ಜೂನ್ ತಿಂಗಳ 25ರಂದು ವಿಜಯಪುರ ಜಿಲ್ಲೆಯಲ್ಲಿ ವಕ್ಫ್ ಅದಾಲತ್ ಹಮ್ಮಿಕೊಳ್ಳಲಾಗಿತ್ತು. ಇದರ ಆಧಾರದ ಮೇಲೆ ಕಂದಾಯ ಅಧಿಕಾರಿಗಳು ವಕ್ಫ್ ಆಸ್ತಿ ಅತಿಕ್ರಮಣಕ್ಕೆ ನೋಟಿಸ್ ನೀಡಿದ್ದಾರೆ. ಇದನ್ನು ತಪ್ಪಾಗಿ ಅರ್ಥೈಸಿ ರಾಜ್ಯಾದ್ಯಂತ ಗೊಂದಲ ಮೂಡಿಸಲಾಗಿದೆ ಎಂದು ಸಚಿವ ಜಮೀರ್ ಅಹಮದ್ ಖಾನ್ ಹೇಳಿದರು.

ಸಮುದಾಯದ ಸೇವೆಗಾಗಿ ಮುಸ್ಲಿಂ ದಾನಿಗಳು ನೀಡಿದ ಆಸ್ತಿಯನ್ನು ವಕ್ಫ್ ಆಸ್ತಿ ಎಂದು ಪರಿಗಣಿಸಲಾಗುತ್ತದೆ. ರಾಜ್ಯದಲ್ಲಿ ಒಟ್ಟಾರೆ 1.28 ಲಕ್ಷ ಎಕರೆ ವಕ್ಫ್ ಆಸ್ತಿ ಇರುವುದಾಗಿ ದಾಖಲೆಗಳಲ್ಲಿದೆ. ಈ ಜಮೀನಿನಲ್ಲಿ 47,263 ಎಕರೆ ಇನಾಂ ರದ್ದತಿ ಹಾಗೂ 23,623 ಎಕರೆ ಭೂ ಸುಧಾರಣೆ ಕಾಯ್ದೆ ಅನುಸಾರ ಉಳುವವರಿಗೆ ಮಂಜೂರು ಮಾಡಲಾಗಿದೆ. ಸುಮಾರು 3000 ಎಕರೆ ವಕ್ಫ್ ಜಮೀನನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಸರ್ಕಾರವೇ ವಶಪಡಿಸಿಕೊಂಡಿದೆ. ಸುಮಾರು 17,969 ಎಕರೆ ವಕ್ಫ್ ಜಮೀನನ್ನು ಖಾಸಗಿ ವ್ಯಕ್ತಿಗಳು ಅತಿಕ್ರಮಣ ಮಾಡಿದ್ದಾರೆ. ಇದರಲ್ಲಿ ಶೇ.95ರಷ್ಟು ಜನರು ಮುಸ್ಲಿಂ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಉಳಿದ ಶೇ.5ರಷ್ಟು ಜಮೀನನ್ನು ಅನ್ಯ ಕೋಮಿನವರ ಸುಪರ್ದಿಯಲ್ಲಿದೆ ಎಂದರು.

ಈ ವಿಚಾರದಲ್ಲಿ ವಿನಾಕಾರಣ ರಾಜಕೀಯ ಸಲ್ಲದು. ಕಾಯ್ದೆ ಅನುಸಾರ ರಾಜ್ಯದಲ್ಲಿ ಅಧಿಕಾರ ನಡೆಸಿದ ಎಲ್ಲಾ ಸರ್ಕಾರಗಳು ನೋಟಿಸ್ ನೀಡುವ ಕೆಲಸ ಮಾಡಿವೆ. ಮೈಸೂರು ಮುನೇಶ್ವರ ನಗರದಲ್ಲಿ ವಕ್ಫ್ ಜಾಗದಲ್ಲಿ ವಾಸವಾಗಿರುವ ಕುಟುಂಬಗಳನ್ನು ಒಕ್ಕಲು ಎಬ್ಬಿಸುವುದಿಲ್ಲ. ದಿವಾನ್ ವಿಶ್ವೇಶ್ವರಯ್ಯನವರು ಓದಿದ ಚಿಕ್ಕಬಳ್ಳಾಪುರ ಜಿಲ್ಲೆಯ ಮುದ್ದೇನಹಳ್ಳಿ ಶಾಲೆಯ ವಿವಾದವನ್ನು ಸರ್ಕಾರ ಪರಿಹರಿಸಿದೆ. ಶಾಲೆಗೆ ಜಮೀನು ಮಂಜೂರು ಮಾಡಿ ಪಹಣಿಯನ್ನು ನೀಡಲಾಗಿದೆ ಎಂದು ಸಚಿವ ಜಮೀರ್ ಅಹಮದ್ ಖಾನ್ ಹೇಳಿದರು.

## ಸಮಸ್ಯೆ ಬಗೆಹರಿಸದಿದ್ದಲ್ಲಿ ಧರಣಿಯ ಎಚ್ಚರಿಕೆ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಬೀದಿ ಬದಿ ವ್ಯಾಪಾರಿಗಳ ಸಮಸ್ಯೆಯನ್ನು ತ್ವರಿತಗತಿಯಲ್ಲಿ ಪರಿಹರಿಸಲು ಜನಪ್ರತಿನಿಧಿಗಳು, ಅಧಿಕಾರಿಗಳು ಮುಂದಾಗಬೇಕು ಎಂದು ಒತ್ತಾಯಿಸಿ ಸಿಐಟಿಯು ಸಂಯೋಜಿತ ಕರ್ನಾಟಕ ರಾಜ್ಯ ಬೀದಿ ಬದಿ ವ್ಯಾಪಾರಿಗಳ ಸಂಘದ ತಾಲೂಕು ಸಮಿತಿ ನೇತೃತ್ವದಲ್ಲಿ ತಹಸೀಲ್ದಾರ, ಪಿಎಸ್‌ಐ ಹಾಗೂ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸಂಘದ ಅಧ್ಯಕ್ಷ ಶಾಮೀದಸಾಬ ದಿಂಡವಾಡ ಮಾತನಾಡಿ, ಬೀದಿ ಬದಿ ವ್ಯಾಪಾರಿಗಳ ಸಮಸ್ಯೆಗಳಿಗೆ, ಕುಂದು ಕೊರತೆಗಳ ಪರಿಹಾರಕ್ಕಾಗಿ ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ ಬೀದಿ ಬದಿ ವ್ಯಾಪಾರಿಗಳಿಗೆ ನ್ಯಾಯ ಒದಗಿಸಬೇಕು ಎಂದರು.

ಪ್ರಧಾನ ಕಾರ್ಯದರ್ಶಿ ಪೀರು ರಾಠೋಡ ಮಾತನಾಡಿ, ಗಜೇಂದ್ರಗಡ ನಗರವು ಎಲ್ಲಾ ರೀತಿಯ ವ್ಯಾಪಾರಿಗಳ ಅನುಕೂಲ ಇರುವ ನಗರವಾಗಿದೆ. ಸುತ್ತ ಮುತ್ತಲಿನ ಜನರಿಗೆ, ವ್ಯಾಪಾರಸ್ಥರ ಜೀವನಾಳವಾಗಿದೆ. ಮಾರುಕಟ್ಟೆ ಸ್ಥಳಾಂತರದಿಂದಾಗಿ ಎಷ್ಟೋ ಬಡ ಕುಟುಂಬಗಳು ಇದೀಗ ಬೀದಿಗೆ ಬರುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸರಿಪಡಿಸಲು ಮುಂದಾಗಬೇಕು ಎಂದರು.

ಈ ಸಂದರ್ಭದಲ್ಲಿ ಕಾರ್ಮಿಕರ ಮುಖಂಡರಾದ ಬಾಲು ರಾಠೋಡ, ಎಂ.ಎಸ್. ಹಡಪದ, ಚೌಡಮ್ಮ ಯಲ್ಲು, ಮೈಬೂಸಾಬ್ ಮಾಲ್ದಾರ, ಮುತ್ತಣ್ಣ ರಾಠೋಡ, ಅಂಬರೇಶ ಚವ್ಹಾಣ, ಮಾರುತಿ ಗೊಂದಲೆ, ಮುತ್ತಣ್ಣ ತೇಜಪ್ಪ ರಾಠೋಡ, ವಿಷ್ಣು ಚಂದುಕರ, ಮಹಾಂತೇಶ ಹೀರೇಮಠ, ಬಡಿಗೇರ ಪರಶುರಾಮ, ಗಂಗಾಧರ ಸತ್ತನ್ನವರ, ಯಮನೂರಸಾಬ ಗಾದಿ, ಮರ್ತುಜಾ ದಿಂಡವಾಡ, ಅಶೋಕ್ ಚವ್ಹಾಣ, ಕಳಕಪ್ಪ ಮಾಳೋತ್ತರ, ರಾಜುಪಾಳ, ಅಲ್ಲಾಬಕ್ಷಿ ಮುಚ್ಚಾಲಿ, ಸುರೇಶ್ ಅಕ್ಕಸಾಲಿ, ನಾಗರಾಜ ಅಚೀರ, ದೇವಕ್ಕ ರಾಠೋಡ, ಭದ್ರೇಶ್ ರಾಠೋಡ, ದಾನಪ್ಪ ರಾಠೋಡ, ಮಂಜುನಾಥ ಚವ್ಹಾಣ, ನಾಗಪ್ಪ ಅಜ್ಮೀರ್ ಮುಂತಾದವರಿದ್ದರು.

# ಒತ್ತಡವಿಲ್ಲದೇ ಪರೀಕ್ಷೆ ಎದುರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿ.ಡಿ.ಎಸ್. ಶ್ರೀಮತಿ ಎಸ್.ಪಿ. ಹುಯಿಲಗೋಳ ಬಾಲಕಿಯರ ಪ್ರೌಢಶಾಲೆಯಲ್ಲಿ (ಜೆ.ಐ.ಟಿ.ಓ. ಲೇಡಿಸ್ ವಿಂಗ್) ಜೈನ್ ಸಮಾಜದ ಮಹಿಳೆಯರ ವತಿಯಿಂದ ಎಸ್. ಎಸ್. ಎಲ್.ಸಿ. ವಿದ್ಯಾರ್ಥಿನಿಯರಿಗೆ ಪರೀಕ್ಷೆಯನ್ನು ಒತ್ತಡವಿಲ್ಲದೆ ಹೇಗೆ ನಿಭಾಯಿಸಬೇಕು ಎಂಬ ವಿಷಯದ ಕುರಿತು ಡಾ. ಸಂತೀಶ ಹೊಂಬಾಳಿಯವರಿಂದ ಉಪನ್ಯಾಸ ಏರ್ಪಡಿಸಲಾಗಿತ್ತು.



ಎಸ್. ಎಸ್. ಎಲ್.ಸಿ ವಾರ್ಷಿಕ ಪರೀಕ್ಷೆಯನ್ನು ಹೇಗೆ ಎದುರಿಸಬೇಕು, ಹೇಗೆ ಓದುವುದು, ಪರೀಕ್ಷೆ ತಯಾರಿ ಮಾಡುವುದು ಇತ್ಯಾದಿ ವಿಷಯಗಳನ್ನು ವಿವರಿಸಿದ ಡಾ. ಹೊಂಬಾಳಿ, ಮಕ್ಕಳು ದಿನಾಲು ನಾಲ್ಕು ಗಂಟೆ ಓದಿನತ್ತ ಗಮನ ಕೊಡಬೇಕು. ಒಂದು ಗಂಟೆ ಬರೆಯಬೇಕು. ಒಂದು ವರ್ಷ ಓದಿದ ಮಕ್ಕಳು ಕೇವಲ ಮೂರು ಗಂಟೆಯಲ್ಲಿ ಪರೀಕ್ಷೆಯನ್ನು ಎದುರಿಸಬೇಕಾಗುತ್ತದೆ.

ಮಾನಸಿಕವಾಗಿ ಸದೃಢರಾಗಬೇಕು, ಪರೀಕ್ಷೆಯ ಸಮಯದಲ್ಲಿ ಅತಿ ನಿದ್ದೆಗೆಟ್ಟು ಓದುವುದು ಮಾಡಬಾರದು ಎಂದು ಕಿವಿಮಾತು ಹೇಳಿದರು. ಕಾರ್ಯಕ್ರಮದ ಆಯೋಜಕರಾದ ಜಿಟೋ ಜೈನ್ ಲೇಡಿಸ್ ವಿಂಗ್‌ನ ಪದಾಧಿಕಾರಿಗಳಾದ ಪ್ರೀತಿ ಬನ್ಸಾಲಿ, ಇಂದಿರಾ ಬಾಗಮಾರ, ಸೀಮಾ ಲುಂಕಡ್, ಮುಂತಾದವರು ಕೊಠಾರಿ ಭಾಗವಹಿಸಿ ಮಕ್ಕಳಿಗೆ ಪ್ರೋತ್ಸಾಹ ತುಂಬಿದರು.

ಅಧ್ಯಕ್ಷತೆಯನ್ನು ಪ್ರೌಢಶಾಲೆಯ ಮುಖ್ಯಸ್ಥ ಆರ್.ಆರ್. ಜಾಲಿಹಾಳ ವಹಿಸಿದ್ದರು. ಕಾರ್ಯಕ್ರಮದಲ್ಲಿ ಎಸ್.ಎಸ್. ಗಂಜಿ, ವ್ಹಿ.ಎಸ್. ಮುರಗಿ ಭಾಗವಹಿಸಿದ್ದರು. ಕಾರ್ಯಕ್ರಮದ ಕುರಿತು ಆರ್. ಎಮ್. ಪಟ್ಟಣಶೆಟ್ಟಿ ತಮ್ಮ ಅನಿಸಿಕೆಯನ್ನು ತಿಳಿಸಿದರು.

## ಸಂಪಾದಕೀಯ

# ವರ್ಗಾವಣೆಗೆ ಪೂರ್ವಾನುಮತಿ; ಭ್ರಷ್ಟಾಚಾರಕ್ಕೆ ಮತ್ತೊಂದು ದಾರಿ

ರಾಜ್ಯದಲ್ಲಿ ಸರ್ಕಾರಿ ಅಧಿಕಾರಿಗಳ ವರ್ಗಾವಣೆ ಎನ್ನುವುದು ಒಂದು ಮಾಫಿಯಾ ರೀತಿ ಬದಲಾಗಿದೆ. ಅದು ಕಾಂಗ್ರೆಸ್ ಸರ್ಕಾರವೇ ಇರಲಿ ಅಥವಾ ಬಿಜೆಪಿ ಸರ್ಕಾರವೇ ಇರಲಿ, ಎಲ್ಲ ಸರ್ಕಾರಗಳಲ್ಲೂ ಅಧಿಕಾರಗಳ ವರ್ಗಾವಣೆಯಲ್ಲಿ ವ್ಯಾಪಕವಾದ ಭ್ರಷ್ಟಾಚಾರ ನಡೆದಿರುವುದು ಎಲ್ಲರಿಗೂ ಗೊತ್ತಿರುವ ಸಂಗತಿ.

ಹೊಸದಾಗಿ ಸರ್ಕಾರ ಅಸ್ತಿತ್ವಕ್ಕೆ ಬರುತ್ತಿದ್ದಂತೆ, ಆಯಕಟ್ಟಿನ ಸ್ಥಳಗಳಲ್ಲಿ ಪ್ರಮುಖ ಸಚಿವರು, ಶಾಸಕರು ತಮಗೆ ಬೇಕಾದವರಿಗೆ ಮಣೆ ಹಾಕುತ್ತಾರೆ. ತಮ್ಮ ಪರವಾಗಿ ಕೆಲಸ ಮಾಡುವಂತಹ ಅಧಿಕಾರಿಗಳಿಗೆ ಶಿಫಾರಸು ಪತ್ರ ಕೊಡುತ್ತಾರೆ. ನಿಯಮ ಮೀರಿಯೂ ಮುಂಬಡ್ತಿ ಕೊಟ್ಟು ವರ್ಗಾವಣೆ ಮಾಡಿಸಿಕೊಂಡಿರುವ ಅನೇಕ ಉದಾಹರಣೆಗಳು ಈಗಲೂ ಕಣ್ಣ ಮುಂದಿವೆ.

ಈ ಎಲ್ಲಾ ಅಕ್ರಮಗಳಿಗೆ ತಡೆ ನೀಡಬೇಕಾದ ಮುಖ್ಯಮಂತ್ರಿ ಸಿದ್ದರಾಮಯ್ಯ, ಇನ್ನು ಮುಂದೆ ಸರ್ಕಾರಿ ಅಧಿಕಾರಿಗಳ ವರ್ಗಾವಣೆಗೆ ಪೂರ್ವಾನುಮತಿ ಕಡ್ಡಾಯಗೊಳಿಸಿದ್ದಾರೆ. ಸಿದ್ದರಾಮಯ್ಯ ಅವರ ಈ ನಿರ್ಧಾರದಿಂದ, ಸರ್ಕಾರಿ ಅಧಿಕಾರಿಗಳ ವರ್ಗಾವಣೆಯಲ್ಲಿ ಪಾರದರ್ಶಕತೆ ಮತ್ತು ಆಡಳಿತ ಸುಧಾರಣೆಯನ್ನು ತರಲು ಸಾಧ್ಯವೇ ಇಲ್ಲ.

ಸಚಿವರು, ಶಾಸಕರು ತಮಗೆ ಬೇಕಾದವರಿಗೆ ವರ್ಗಾವಣೆ ಮಾಡುವಂತೆ ಕೊಡುವ ಶಿಫಾರಸು ಪತ್ರಗಳನ್ನ, ಮುಖ್ಯಮಂತ್ರಿಗಳು ರದ್ದುಗೊಳಿಸಲು ಸಾಧ್ಯವೇ ಇಲ್ಲ. ಏನೇ ಮಾಡಿದರು ಅಂತಿಮವಾಗಿ ತಮ್ಮ ಪಕ್ಷದ ಸಚಿವರು ಶಾಸಕರು ಹೇಳಿದ್ದನ್ನೇ ಮುಖ್ಯಮಂತ್ರಿಗಳು ಮಾಡಬೇಕು.

ಆ ಮೂಲಕ ವರ್ಗಾವಣೆಯಲ್ಲಿ ಈ ಹಿಂದಿನಂತೆ ಭ್ರಷ್ಟಾಚಾರವು ಮುಂದುವರೆಯಲಿದೆ. ಇಷ್ಟು ದಿನ ಮುಖ್ಯಮಂತ್ರಿಗಳ ಪೂರ್ವಾನುಮತಿ ಇಲ್ಲದೆ ಸಚಿವರು ತಮ್ಮ ಇಲಾಖೆಯ ಅಧೀನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳ ಮೂಲಕ ಮಾಡಿಸುತ್ತಿದ್ದ ವರ್ಗಾವಣೆಯನ್ನು ಇನ್ನು ಮುಂದೆ ಮುಖ್ಯಮಂತ್ರಿಗಳ ಕಚೇರಿಯಿಂದಲೇ ಮಾಡುತ್ತಾರೆ. ಹೀಗಾದಲ್ಲಿ ಆಡಳಿತದಲ್ಲಿ ಸುಧಾರಣೆ ಮತ್ತು ಅಧಿಕಾರಿಗಳ ವರ್ಗಾವಣೆಯ ವಿಷಯದಲ್ಲಿ ಪಾರದರ್ಶಕತೆ

ಹೇಗೆ ಸಾಧ್ಯ? ಸಿದ್ದರಾಮಯ್ಯ ರೂಪಿಸಿರುವ ಹೊಸ ನಿಯಮದಿಂದ ಭ್ರಷ್ಟಾಚಾರ ಇನ್ನಷ್ಟು ವ್ಯಾಪಕವಾಗಿ ಪಸರಿಸಲಿದೆ.

### ಗಿಡ-ಮರ, ಪರಿಸರವನ್ನೇ ತಮ್ಮ ಮಕ್ಕಳಂತೆ ಕಂಡ ಪದ್ಮಶ್ರೀ ತುಳಸಿ ಗೌಡ

# ವೃಕ್ಷಮಾತೆಗೊಂದು ನುಡಿ ನಮನ



ಬೀಜಗಳನ್ನು ಸಂಗ್ರಹಿಸಿ, ಸಸಿ ಮಾಡಿ ನೆಟ್ಟು ಬೆಳಸುವದರಲ್ಲಿಯೇ ಜೀವನದ ಸಾರ್ಥಕತೆಯನ್ನು ಕಂಡ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾದ ವೃಕ್ಷಮಾತೆ ತುಳಸಿಗೌಡ ಇನ್ನು ನೆನಪು ಮಾತ್ರ. ತುಳಸಿಗೌಡರು 1938ರಲ್ಲಿ ಹೊನ್ನಾಳ್ಳಿ ಗ್ರಾಮದ ಹಾಲಕ್ಕಿ ಬಡ ಬುಡಕಟ್ಟು ಕುಟುಂಬದಲ್ಲಿ ಜನಿಸಿದರು. ಬಡತನದ ಕುಟುಂಬವಾದ್ದರಿಂದ ಮನೆಯನ್ನು ನಡೆಸಲು ಬಾಲ್ಯದಲ್ಲಿಯೇ ತಾಯಿಯೊಂದಿಗೆ ಕೆಲಸಕ್ಕೆ ಹೋಗಬೇಕಾಯಿತು. ಇದರಿಂದ ಶಿಕ್ಷಣದಿಂದ ವಂಚಿತರಾದರು. ಹೀಗೆ ಬಾಲ್ಯದಲ್ಲಿ ಅನೇಕ ಕಷ್ಟಗಳನ್ನು ಎದುರಿಸಿದ ಇವರು 25ನೇ ವಯಸ್ಸಿನಲ್ಲಿ ಕರ್ನಾಟಕ ಅರಣ್ಯ ಇಲಾಖೆಯಲ್ಲಿ ಸಸಿಗಳನ್ನು ಪೋಷಿಸುವ ಕೆಲಸಕ್ಕೆ ಸೇರಿದರು. ತದನಂತರ ಅಲ್ಲಿನ ಗಿಡಗೆಳೊಂದಿಗೆ ವಿಶೇಷವಾದ ಕಾಳಜಿಯನ್ನು ಬೆಳಸಿಕೊಂಡರು. ಅವುಗಳನ್ನು ಮಕ್ಕಳಂತೆ ಸಾಕತೊಡಗಿದರು. ಹೀಗೆ ಪರಿಸರವೇ ಅವರಿಗೆ ಕುಟುಂಬವಾಯಿತು. ತಮ್ಮ 30 ವರ್ಷಗಳ ಸೇವಾ ಅವಧಿಯಲ್ಲಿ ಲಕ್ಷಾಂತರ ಗಿಡಗಳನ್ನು ನೆಟ್ಟು ಬೆಳಸಿದ ಕೀರ್ತಿ ತುಳಸಿಗೌಡ ಅವರದು.

ಇವರು ಯಾವದೇ ಶಿಕ್ಷಣವನ್ನು ಪಡೆಯದೇ ಇದ್ದರೂ, ಇವರ ಜೀವನವೇ ಇಂದು ಪಠ್ಯಪಾಠವಾಗಿದೆ. ಸರಕಾರಗಳು, ಅನೇಕ ಸಂಘ-ಸಂಸ್ಥೆಗಳು ಮತ್ತು ಕಂಪನಿಗಳು ಪ್ರಕೃತಿಯನ್ನು ಸಂರಕ್ಷಿಸುವಲ್ಲಿ ನಿರತರಾಗಿದ್ದ ತುಳಸಿಗೌಡರಿಗೆ ಅನೇಕ ಪ್ರಶಸ್ತಿ-ಪುರಸ್ಕಾರಗಳನ್ನ ನೀಡಿ ಗೌರವಿಸಿವೆ. ಪ್ರಮುಖವಾಗಿ ವಿಷಾದವೆನುಸುವ ಅಂಶವೆಂದರೆ, ಇಂದಿನ ಯುವ ಪೀಳಿಗೆಗೆ ಹೆಚ್ಚಾಗಿ ಇವರ ಬಗ್ಗೆ ಮಾಹಿತಿಯೇ ಇಲ್ಲ! ನಾವು ಸಮಾಜಕ್ಕಾಗಿ ಬದುಕುತ್ತಿರುವ ಅನೇಕ ವ್ಯಕ್ತಿಗಳನ್ನು ತಿರಸ್ಕಾರ ಭಾವನೆಯಿಂದ ನೋಡುತ್ತಿದ್ದೇವೆ. ನಮಗೆ ಜೈಲಿಗೆ ಹೋಗಿಬರುವವರು, ಸೋಶಿಯಲ್ ಮೀಡಿಯಾಗಳಲ್ಲಿ ರೀಲ್ಸ್ ಮಾಡುವವರು, ಭ್ರಷ್ಟ ರಾಜಕಾರಣಿಗಳು, ಸಿನಿಮಾ ತಾರೆಯರನ್ನು ಆದರ್ಶ ವ್ಯಕ್ತಿಗಳಾಗಿ ಕಾಣುತ್ತಿದ್ದೇವೆ. ಆದರೆ ನಮಗೆ ನಿಜವಾಗಿ ಆದರ್ಶವಾಗಬೇ ಕಾದವರು ಸಮಾಜಕ್ಕಾಗಿ ತಮ್ಮ ಸ್ವಂತ ಜೀವನವನ್ನು ಮುಡಿಪಾಗಿ ಇಟ್ಟವರು. ಇಂತಹ ವ್ಯಕ್ತಿಗಳಿಂದಲೇ ನಮ್ಮ ಸಮಾಜವು ಉತ್ತಮ ರೀತಿಯಲ್ಲಿದೆ. ನಾವು ಇವರ ವಿಚಾರಗಳನ್ನು ತಿಳಿಯಬೇಕಾಗಿದೆ ಮತ್ತು ಅನುಸರಿಸಬೇಕಾಗಿದೆ.

ಪದ್ಮಶ್ರೀ ತುಳಸಿಗೌಡರೇ ಹೇಳುವಂತೆ ಪಕೃತಿಯನ್ನು ರಕ್ಷಿಸಿದಾಗಲೇ ಪ್ರಕೃತಿ ನಮ್ಮನ್ನ ರಕ್ಷಿಸುತ್ತದೆ. ಈ ಮಾತು ಅಕ್ಷರಶಃ ಸತ್ಯ. ಇಂದು ನಾವು ಪ್ರಕೃತಿಯನ್ನು ತುಂಬಾ ನಿರ್ಲಕ್ಷಿಸುತ್ತಿದ್ದೇವೆ. ಜೊತೆ-ಗೆ ಅದರ ಪರಿಣಾಮಗಳನ್ನು ಸಹ ಅನುಭವಿಸುತ್ತಿದ್ದೇವೆ. ಆದರೆ, ಇದು ಹೀಗೆಯೇ ಮುಂದುವರೆವರೆ ನಮ್ಮ ಅವನತಿಯನ್ನು ನಾವೇ ತಂದು-ಕೊಂಡತೆ ಆಗುತ್ತದೆ. ನಾವು ನಮ್ಮ ಮಾರ್ಗವನ್ನು, ಯೋಚನೆಯನ್ನು ಬದಲಾಯಿಸಬೇಕಾಗಿದೆ.

ಒಬ್ಬ ವ್ಯಕ್ತಿ ಪ್ರತಿ ವರ್ಷ ಕನಿಷ್ಠ 5 ಗಿಡಗಳನ್ನು ನೆಡಬೇಕು. ಸ್ನೇಹಿತರಿಗೆ, ಕುಟುಂಬದವರಿಗೆ ಗಿಡಗಳನ್ನ ಕೊಡುಗೆಯಾಗಿ ನೀಡುವವರ ಮೂಲಕ ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸಬೇಕು. ಸ್ವಾರ್ಥ ತುಂಬಿದ ಈ ಸಮಾಜದಲ್ಲಿ ಇಂತಹ ಅನೇಕ ನಿಸ್ವಾರ್ಥ ಜೀವಿಗಳು ಇರುತ್ತವಾ ಎಂದು ಆಶ್ಚರ್ಯಪಡುವಂತೆ ತಮ್ಮನ್ನು ತಾವು ಸಮಾಜ ಸೇವೆಗೆ ಸಮರ್ಪಿಸಿಕೊಂಡಿದ್ದಾರೆ. ಇಂಥವರ ಜೀವನದಿಂದ ಸ್ಫೂರ್ತಿ ಪಡೆದು ಅವರಲ್ಲಿರುವ ಕೆಲ ಉತ್ತಮ ಗುಣಗಳನ್ನಾದರೂ ಎರವಲು ಪಡೆದರೆ ಅದೇ ನಾವು ಅವರಿಗೆ ಸಲ್ಲಿಸುವ ಗೌರವ.

ಬನ್ನಿ, ಪದ್ಮಶ್ರೀ ತುಳಸಿಗೌಡರನ್ನು ನೆನೆಯೋಣ, ಗೌರವಿಸೋಣ.

–



**ರವಿಕುಮಾರ್ ಚಂ.ಹೊಂಬಾಳಿ. ಗದಗ.**

# ಕವಿಗೋಷ್ಠಿಗೆ ಶಿಲ್ಪಾ ಮ್ಯಾಗೇರಿ ಆಯ್ಕೆ

■ **ವಿಜಯಸಾಕ್ಷಿ ಸುದ್ದಿ, ಗದಗ**



ಸ್ಥಳೀಯ ಬಸವೇಶ್ವರ ಪದವಿ ಕಾಲೇಜಿನ ಕನ್ನಡ ಉಪನ್ಯಾಸಕಿಯಾಗಿ, ಜೊತೆಗೆ ಕೃಷಿಯಲ್ಲೂ ಯಶಸ್ಸು ಕಂಡ ಕವಯಿತ್ರಿ ಶಿಲ್ಪಾ ಮ್ಯಾಗೇರಿಯವರು ಮಂಡ್ಯದಲ್ಲಿ ಜರುಗಲಿರುವ ಅಖಿಲ ಭಾರತ 87ನೇ ಸಾಹಿತ್ಯ ಸಮ್ಮೇಳನದ ಕವಿಗೋಷ್ಠಿಗೆ ಗದಗ ಜಿಲ್ಲೆಯಿಂದ ಆಯ್ಕೆಯಾಗಿದ್ದಾರೆ.

ಡಿ.21ರಂದು ಸಮನಾಂತರ ವೇದಿಕೆಯಲ್ಲಿ ಡಾ. ಪ್ರದೀಪಕುಮಾರ ಹೆಬ್ರಿಯವರ ಅಧ್ಯಕ್ಷತೆಯಲ್ಲಿ ಜರುಗಲಿರುವ ಕವಿಗೋಷ್ಠಿಯಲ್ಲಿ ಶಿಲ್ಪಾ ತಮ್ಮ ಕವಿತೆ ವಾಚನ ಮಾಡಲಿದ್ದಾರೆ. ಪ್ರೊ. ಶಿಲ್ಪಾ ಅವರ ಭಾರತಾಂಬೆ, ಆಕಾಶಕ್ಕೊಂದು ಏಣಿ, ಮಾತು ಮೌನದ ನಡುವೆ ಮತ್ತು ಚೈತ್ರದ ಚರಮ ಗೀತೆ ಮುಂತಾದ ಕಾವ್ಯ ಕುಸುಮಗಳು ಕನ್ನಡ ಸಾರಸ್ವತ ಲೋಕದ ಓದುಗರ ಗಮನ ಸೆಳೆದಿವೆ.

ಕವಯತ್ರಿ ಶಿಲ್ಪಾ ಅವರೊಂದಿಗೆ ಗದಗ ಜಿಲ್ಲೆಯಿಂದ ಹಿರಿಯ ಸಾಹಿತಿ, ಹಾಸ್ಯ ಕಲಾವಿದ, ಪತ್ರಕರ್ತ ಅರುಣ್ ಕುಲಕರ್ಣಿ ಅವರೂ ಕೂಡ ಮಂಡ್ಯದಲ್ಲಿ ನಡೆಯಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಕವಿಗೋಷ್ಠಿಯಲ್ಲಿ ಭಾಗವಹಿಸುತ್ತಿದ್ದಾರೆ. ಇವರಿಗೆ ನಿರಂತರ ಪ್ರಕಾಶನ ಮತ್ತು ಮಕಾನದಾರ ಸಾಹಿತ್ಯ ಪ್ರತಿಷ್ಠಾನದ ವತಿಯಿಂದ ಸಾಹಿತಿ ಎ.ಎಸ್. ಮಕಾನದಾರ ಶುಭ ಕೋರಿದ್ದಾರೆ.

### ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಅಮೃತೋಪದೇಶ ನೀಡಿದ ಶ್ರೀಮದುತ್ತರಾದಿ ಶ್ರೀಗಳು

# ಭಗವಂತನ ಕೃಪೆಯಿಂದ ಭಕ್ತರ ಉದ್ಧಾರ ಸಾಧ್ಯ

■ **ವಿಜಯಸಾಕ್ಷಿ ಸುದ್ದಿ, ಗದಗ**

ಭಗವಂತನ ಕಾರುಣ್ಯ, ಅನುಗ್ರಹವಿದ್ದಲ್ಲಿ ನಾಸ್ತಿಕನೂ ಆಸ್ತಿಕನಾಗಬಲ್ಲ ಎನ್ನುವುದನ್ನು ಭಗವಂತ ಸಾಕ್ಷಾತ್ಕರಿಸಿದ್ದಾನೆ. ಇಂದು ರಘುನಾಥತೀರ್ಥ ಶ್ರೀಗಳ ಆರಾಧನೆಯ ಪುಣ್ಯದಿನವಾಗಿದೆ ಎಂದು ಶ್ರೀ ಮನ್ಮಧ್ವಾಚಾರ್ಯ ಮೂಲಮಹಾಸಂಸ್ಥಾನ ಶ್ರೀ ಮದುತ್ತರಾದಿಮಠಾಧೀಶರಾದ ಪೂಜ್ಯ ಶ್ರೀಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರು ಹೇಳಿದರು.

ಅವರು ಗದಗ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರ ಸ್ವಾಗತ ಸಮಿತಿ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಅಮೃತೋಪದೇಶ ನೀಡಿ ಮಾತನಾಡಿದರು.

ರಘುನಾಥತೀರ್ಥ ಶ್ರೀಗಳು ಒಂದು ಬಾರಿ ಭಗವಂತನ ಜ್ಞಾನದಲ್ಲಿ ಮಗ್ನರಾಗಿದ್ದ ವೇಳೆ ಮಹಿಳೆಯೋರ್ವಳು ಆಗಮಿಸಿ ಗುರುಗಳಿಗೆ ಭಕ್ತಿಭಾವದಿಂದ ವಂದಿಸಿದಾಗ ಭಗವಂತನ ಜ್ಞಾನದಲ್ಲಿ ಮುಳುಗಿದ್ದ ಶ್ರೀಗಳಿಗೆ ಅವರ ಶಿಷ್ಯಂದಿರು ಮಹಿಳೆಯೋರ್ವಳು ನಿಮ್ಮ ದರ್ಶನಕ್ಕೆ ಬಂದು ಕೈಮುಗಿದು ನಿಂತಿದ್ದಾಳೆ ಎಂದು ಹೇಳುತ್ತಿದ್ದಂತೆಯೇ ಶ್ರೀಗಳ ಬಾಯಿಂದ ಹೊರಬಂದ ಮಾತು, ಅಷ್ಟಪುತ್ರೆಭವ ಎಂದು. ಆದರೆ ಆ ಸಂದರ್ಭದಲ್ಲಿ ಆ ಮಹಿಳೆಯ ಪತಿ ಮೃತನಾಗಿದ್ದು, ಆ ಬೇಸರದಲ್ಲಿ ತಾನೂ ಸಹ ಸತಿ ಸಹಗಮನ ಹೋಗಲು ನಿರ್ಧರಿಸಿ ಶ್ರೀಗಳ ಬಳಿ ಬಂದಿದ್ದಳು.



ಈ ವಿಷಯವನ್ನು ಕಣ್ಣುಮುಚ್ಚಿ ಧ್ಯಾನದಲ್ಲಿ ಮಗ್ನರಾಗಿದ್ದ ಶ್ರೀಗಳ ಗಮನಕ್ಕೆ ತಂದಾಗ ಗಂಡ ಮೃತನಾಗಿ ಶವ ಸ್ಮಶಾನದಲ್ಲಿದ್ದಾಗ ಅಷ್ಟಪುತ್ರರನ್ನು ಹೆರುವುದು ಹೇಗೆ ಎಂಬ ಚಿಂತೆ ಮಹಿಳೆ ಮತ್ತು ಶಿಷ್ಯರಲ್ಲಿ ಮೂಡಿ ಆಶ್ಚರ್ಯಕ್ಕೆ ಕಾರಣವಾಯಿತು. ಈ ಸಂದರ್ಭದಲ್ಲಿ ಆ ಮಾತನ್ನು ನಾನು ಮಾತನಾಡಿಲ್ಲ. ನನ್ನಿಂದ ಭಗವಂತ ಮೂಲರಾಮ ದಿಗ್ವಿಜಯ ದೇವರು ಮಾತನಾಡಿಸಿದ್ದಾರೆ ಎಂದು ಹೇಳಿದ್ದು, ನಂತರ ಆಕೆಯ ಮೃತ ಪತಿ ಚಿತೆ ಮೇಲಿಂದ ಎದ್ದು ವಾಪಸ್ ಮನೆಗೆ ಬಂದು ಅಷ್ಟಪುತ್ರರನ್ನು ಪಡೆದಿದ್ದು ಮಹಿಮೆಯಾಗಿದೆ ಎಂದರು.

ಬೆಳಿಗ್ಗೆ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಶ್ರೀಗಳ ಪಾದಪೂಜೆ ಹಾಗೂ ತಪ್ತ ಮುದ್ರಾಧಾರಣೆ, ಶ್ರೀ ಮೂಲರಾಮ ದಿಗ್ವಿಜಯ ದೇವರ ಪ್ರಜೆ, ಸಂಜೆ ವಿದ್ವಾಂಸರಿಂದ ಉಪನ್ಯಾಸ ಜರುಗಿತು.

> ಕಲಿಯುಗದಲ್ಲಿ ಭಕ್ತರ ಮಾತನ್ನು ಭಗವಂತ ಸತ್ಯ ಮಾಡುತ್ತಾನೆ ಎನ್ನುವುದಕ್ಕೆ ಮೃತ ವ್ಯಕ್ತಿಗೆ ಜೀವತುಂಬಿ ರಘುನಾಥ ತೀರ್ಥರ ಮಾತನ್ನು ಸತ್ಯ ಮಾಡುವ ಮೂಲಕ ಮೂಲರಾಮ ದೇವರು ಭಗವಂತನ ಕೃಪೆ ಅನುಗ್ರಹದಿಂದ ಭಕ್ತರ ಉದ್ಧಾರ ಸಾಧ್ಯ ಎಂದು ಸಾಬೀತುಪಡಿಸಿದ್ದಾರೆ ಎಂದು ಶ್ರೀಗಳು ತಿಳಿಸಿದರು.

### ಹುಬ್ಬಳ್ಳಿ ಕೋರ್ಟ್ ವೃತ್ತದಿಂದ ದೇಸಾಯಿ ಕ್ರಾಸ್‌ವರೆಗೆ ಫ್ಲೈಓವರ್

# ಜನವರಿ ಅಂತ್ಯಕ್ಕೆ ಪರಿಷ್ಕೃತ ಪ್ರಸ್ತಾವನೆ ಸಲ್ಲಿಸಿ

■ **ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ**

ಹುಬ್ಬಳ್ಳಿ ಕೋರ್ಟ್ ವೃತ್ತದಿಂದ ನಿರ್ಮಾಣವಾಗುತ್ತಿರುವ ಫ್ಲೈಓವರ್‌ನ್ನು ದೇಸಾಯಿ ಕ್ರಾಸ್‌ವರೆಗೆ ಮುಂದುವರೆಸುವ ಅಥವಾ ಪ್ರಸ್ತುತ ಅಲ್ಲಿರುವ ಅಂಡರ್‌ಪಾಸನ್ನು ತೆಗೆದು ಹಾಕಿ ಈ ಹಿಂದೆ ಇದ್ದ ರಸ್ತೆಯನ್ನು ನಿರ್ಮಾಣ ಮಾಡುವ ಕುರಿತು ಸಾಧಕ-ಬಾಧಕಗಳ ಬಗ್ಗೆ ಚರ್ಚಿಸಲು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರ ಅಧ್ಯಕ್ಷತೆಯಲ್ಲಿ ಡಿ.18ರಂದು ಸಭೆ ನಡೆಯಿತು.

ಫ್ಲೈಓವರ್ ನಿರ್ಮಾಣದ ಪ್ರಾತ್ಯಕ್ಷಿಕೆ ವೀಕ್ಷಣೆ ವೇಳೆ ಮಾತನಾಡಿದ ಹೊರಟ್ಟಿಯವರು, ರಸ್ತೆ ವ್ಯವಸ್ಥೆ ಸರಿಯಾಗಿಲ್ಲದೇ ಈ ಪ್ರದೇಶದ ಜನರು ಹೈರಾಣಾಗಿದ್ದಾರೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಮತ್ತು ಇಂಜಿನಿಯರ್ ಗಮನ ಹರಿಸಬೇಕು ಎಂದು ತಿಳಿಸಿದರು.



ಚನ್ನಮ್ಮ ಸರ್ಕಲ್, ಕೋರ್ಟ್ ವೃತ್ತದಿಂದ ಸರ್ಕೀಟ್ ಹೌಸ್ ಮತ್ತು ರೈಲ್ವೆ ಸೇತುವೆ ಬಳಸಿ ಕೇಶ್ವಾಪುರಗೆ ಸಂಪರ್ಕ ಕಲ್ಪಿಸುವ ಈ ರಸ್ತೆಗೆ ಫ್ಲೈಓವರ್ ಅಗತ್ಯವಿದೆಯೇ ಎಂಬುದರ ಬಗ್ಗೆ ಅತ್ಯಂತ ವೈಜ್ಞಾನಿಕ ರೀತಿಯಲ್ಲಿ ಯೋಚಿಸಿ ನಿರ್ಣಯಿಸಬೇಕು. ಫ್ಲೈಓವರ್ ನಿರ್ಮಾಣವಾಗಲೇಬೇಕು ಎಂದಾದಲ್ಲಿ ಇದರಿಂದಾಗುವ ಸಾಧಕ-ಬಾಧಕಗಳ ಬಗ್ಗೆ ಸರಿಯಾಗಿ ಅರಿಯಬೇಕು. ಅಥವಾ ಫ್ಲೈಓವರ್ ಬದಲಿಗೆ ಪ್ರಸ್ತುತ ಅಲ್ಲಿರುವ ಅಂಡರ್‌ಪಾಸನ್ನು ತೆಗೆದುಹಾಕಿ ಈ ಹಿಂದೆ ಇದ್ದ ರಸ್ತೆಯನ್ನು ನಿರ್ಮಾಣ ಮಾಡುವುದು ಸೂಕ್ತ ಎಂದಾದಲ್ಲಿ ಈ ಬಗ್ಗೆ ಪರಿಷ್ಕೃತ ಪ್ರಸ್ತಾವನೆಯನ್ನು ಬರುವ ಜನವರಿ ಅಂತ್ಯಕ್ಕೆ ಸಲ್ಲಿಸಬೇಕು ಎಂದು ಹೊರಟ್ಟಿಯವರು ಅಧಿಕಾರಿಗಳು ಮತ್ತು ಇಂಜಿನಿಯರುಗಳಿಗೆ ಗಡುವು ವಿಧಿಸಿದರು.

ಸಭೆಯಲ್ಲಿ ಲೋಕೋಪಯೋಗಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ, ಕಾರ್ಯದರ್ಶಿ ಸತ್ಯನಾರಾಯಣ, ಜಿಲ್ಲಾಧಿಕಾರಿ ದಿವ್ಯಪ್ರಭು, ಹುಬ್ಬಳ್ಳಿ-ಧಾರವಾಡ ಮಹಾನಗರ ಪೊಲೀಸ್ ಆಯುಕ್ತರು, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರು, ರಾಷ್ಟ್ರೀಯ ಹೆದ್ದಾರಿ ಉತ್ತರ ವಲಯದ ಮುಖ್ಯ ಇಂಜನಿಯರ್, ಸಂಪರ್ಕ ಮತ್ತು ಕಟ್ಟಡದ ಮುಖ್ಯ ಇಂಜಿನಿಯರ್, ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಮಹೇಶ ವಾಳ್ವೇಕರ್, ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿಗಳ ವೃತ್ತದ ಅಧೀಕ್ಷಕ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿಗಳ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಸೇರಿದಂತೆ ಇನ್ನಿತರರು ಇದ್ದರು.

### ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ವತಿಯಿಂದ ಮನವಿ

# ಗ್ರಾ.ಪಂ ನೌಕರರ ಬೇಡಿಕೆ ಈಡೇರಿಸಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ವತಿಯಿಂದ (ಸಿಐಟಿಯು ಸಂಯೋಜಿತ) ಗ್ರಾ.ಪಂ ನೌಕರರ 19 ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರಕ್ಕೆ ಈಗಾಗಲೇ ಮನವಿ ಸಲ್ಲಿಸಲಾಗಿತ್ತು. ಆದರೆ, ಇಲ್ಲಿಯವರೆಗೆ ಸರ್ಕಾರ ಯಾವುದೇ ಬೇಡಿಕೆಗಳನ್ನು ಈಡೇರಿಸಿಲ್ಲ. ಈ ಎಲ್ಲ ಬೇಡಿಕೆಗಳನ್ನು ಶೀಘ್ರವೇ ಈಡೇರಿಸಬೇಕು ಎಂದು ಒತ್ತಾಯಿಸಿ ಜಿ.ಪಂ ಕಾರ್ಯನಿರ್ವಾಹಕ ಅಧಿಕಾರಿ ಗಳ ಮೂಲಕ ಮುಖ್ಯ ಕಾರ್ಯದರ್ಶಿಗಳಿಗೆ ಮನವಿ ಸಲ್ಲಿಸಿದರು.

ಪ್ರಮುಖ ಬೇಡಿಕೆಗಳಾದ ಗ್ರಾ.ಪಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕರವಸೂಲಿಗಾರ, ಕ್ಲರ್ಕ್, ಡಾಟಾ ಎಂಟ್ರಿ ಆಪರೇಟರ್, ನೀರುಗಂಟಿಗಳು, ಜವಾನ್, ಸ್ವಚ್ಛತಾಗಾರರನ್ನು ಏಕಕಾಲಕ್ಕೆ ಸರ್ಕಾರಿ ನೌಕರರನ್ನಾಗಿ ಘೋಷಿಸಬೇಕು. ನೌಕರರು ನಿವೃತ್ತಿ ಅಥವಾ ಮರಣ ಹೊಂದಿದರೆ ಅವರಿಗೆ ಪ್ರತಿ ತಿಂಗಳು ಕನಿಷ್ಠ ರೂ. 6000 ಪಿಂಚಣಿ ವ್ಯವಸ್ಥೆ ತರಬೇಕು. ಕನಿಷ್ಠ ವೇತನ 31 ಸಾವಿರಕ್ಕೆ ಏರಿಸಬೇಕು, ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಬೇಕು, ಸೇವಾ ಹಿರಿತನ ಪರಿಗಣಿಸಿ ವೇತನ ಹೆಚ್ಚಳ ಮಾಡಬೇಕು ಇತ್ಯಾದಿ ಒಟ್ಟು 19 ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತರು, ಸಿಐಟಿಯು ಕಾರ್ಯಕರ್ತರು, ಗ್ರಾ ಪಂ ನೌಕರರು, ಮುಖಂಡರಾದ ಮಹೇಶ ಹಿರೇಮಠ, ಮಾರುತಿ ಚಿಟಗಿ, ಬಸವರಾಜ ಮಂತೂರ, ರುದ್ರಪ್ಪ ಕಂದಗಲ್ಲ, ಮಹೇಶ ದೊಡ್ಡವಾಡ, ಬಸವರಾಜ ಮೇವುಂಡಿ, ಈಶ್ವರ ದಮಾನಿ, ಬಸವರಾಜ ಅರ್ಕಸಾಲಿ, ಮಹಾಲಿಂಗಪ್ಪ ಮುತಾರಿ, ಪ್ರಕಾಶ ನರೇಗಲ್ಲ, ಶಿವಾನಂದ ಚಲವಾದಿ, ರುದ್ರಪ್ಪ ಐನಾಪೂರ, ಮುತ್ತಪ್ಪ ಅರಹುಣಸಿ, ರಮೇಶ ವಾಸನ, ಮಹೇಶ ಮೂಲಿಮನಿ, ನಾಗರಾಜ ಕಣಗಲ್, ಜಗದೀಶ ವಾಲ್ಮೀಕಿ, ಸತೀಶ ಡೊಳ್ಳಿನ, ಪ್ರಭು ಪೂಜಾರ, ಬಸಮ್ಮ ಮಲ್ಲಾಡದ, ಸುಜಾತ ದೊಡ್ಡಮನಿ ಮುಂತಾದವರಿದ್ದರು.

## ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ




■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಘನಮೌನಿ, ತ್ರಿಕಾಲ ಜ್ಞಾನಿ, ಮೌನ ತಪಸ್ವಿ ಚಿಕೇನಕೊಪ್ಪದ ಶ್ರೀಚನ್ನವೀರ ಶರಣರ 30ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಪೂರ್ವಭಾವಿ ಸಭೆ ಇತ್ತೀಚೆಗೆ ಜರುಗಿತು. ಸಭೆಯಲ್ಲಿ ಸುಕ್ಷೇತ್ರ ಬಳಗಾನೂರ ಶ್ರೀಮಠದ ಪರಮಪೂಜ್ಯ ಶ್ರೀ ಶಿವಶಾಂತವೀರ ಶರಣರು ಸಾನ್ನಿಧ್ಯ ವಹಿಸಿದ್ದರು. ಸಭೆಯಲ್ಲಿ ಶ್ರೀಮಠದ ಭಕ್ತರು, ಶರಣರ ಬಳಗದ ಹಿರಿಯರು ಉಪಸ್ಥಿತರಿದ್ದರು. ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಯಿತು. 2025ರ ಫೆ. 4ರಂದು ಜಾತ್ರಾ ಮಹೋತ್ಸವದ ಅಂಗವಾಗಿ ಜರುಗುವ ಸಾಮೂಹಿಕ ವಿವಾಹದಲ್ಲಿ ಅಸಕ್ತ ವಧು-ವರರ ಹೆಸರುಗಳನ್ನು ಜನವರಿ 28, 2025ರ ಒಳಗಾಗಿ ನೋಂದಾಯಿಸಲು ಮೊ.ಸಂ.-8880808822, 9483661263 ಸಂಪರ್ಕಿಸಬಹುದು. ವಿವಾಹಗಳ ದಾಖಲಾತಿಗಾಗಿ ಶ್ರೀಮಠದಲ್ಲಿ ಮಾತ್ರ ವಿವರವಾದ ಮಾಹಿತಿ ಪಡೆಯಬೇಕು ಎಂದು ಸುಕ್ಷೇತ್ರ ಬಳಗಾನೂರ ಶ್ರೀಮಠವು ಪ್ರಕಟಣೆಯಲ್ಲಿ ತಿಳಿಸಿದೆ.

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಕಾರ್ಯಕ್ರಮದಲ್ಲಿ ಎಸ್.ಪಿ. ಸಂಶಿಮಠ

# ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ಈ ಹಿಂದೆ ಮಹಿಳೆಯರು ಮನೆ ಬಿಟ್ಟು ಹೊರಗೆ ಬರುವುದು ತುಂಬಾ ಕಷ್ಟವಾಗುತ್ತಿತ್ತು. ಆದರೆ ಇಂದಿನ ದಿನಮಾನದಲ್ಲಿ ಮಹಿಳೆಯರು ಪುರುಷರಷ್ಟೇ ಸರಿಸಮಾನವಾಗಿ ಮುಂದೆ ಬಂದಿದ್ದಾರಲ್ಲದೆ, ಯಶಸ್ವಿ ಉದ್ಯಮಿಗಳಾಗಿದ್ದಾರೆ. ನಮ್ಮ ಸಂಸ್ಥೆಯಲ್ಲಿ ಕಳೆದ 4 ವರ್ಷಗಳಿಂದ ಮಹಿಳಾ ಘಟಕವು ಯಶಸ್ವಿಯಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿರುವುದು ಸಂತೋಷವನ್ನುಂಟುಮಾಡುತ್ತಿದೆ ಎಂದು ಸಂಸ್ಥೆಯ ಮಾಜಿ ಅಧ್ಯಕ್ಷ ಹಾಗೂ ಹುಬ್ಬಳ್ಳಿಯ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಎಸ್.ಪಿ. ಸಂಶಿಮಠ ಹೇಳಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ಸುವರ್ಣ ಮಹೋತ್ಸವ ವರ್ಷದ ರಜತ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ದೃಷ್ಟಿಕೋನ ಕಾರ್ಯಾಗಾರ ಹಾಗೂ ತಂತ್ರಜ್ಞಾನದಲ್ಲಿ ಷೇರು ಮಾರುಕಟ್ಟೆ ಕುರಿತು ತಿಳುವಳಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಮಾತನಾಡುತ್ತಾ, ಸಂಸ್ಥೆಯ ಮಹಿಳಾ ಘಟಕವು




ಯಶಸ್ವಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಮೂಲಕ ಸಾಕಷ್ಟು ಮಹಿಳಾ ಉದ್ಯಮಿಗಳಿಗೆ ತಿಳುವಳಿಕೆ ನೀಡುವಂತಹ ಕಾರ್ಯಕ್ರಮವನ್ನು ಏರ್ಪಡಿಸುತ್ತಿರುವುದು ಸಂತಸದ ವಿಚಾರ. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವದ ವರ್ಷವನ್ನು ಈ ವರ್ಷ ಆಚರಿಸಿಕೊಳ್ಳುತ್ತಿದೆ. ಈ ನಿಟ್ಟಿನಲ್ಲಿ ತಮ್ಮೆಲ್ಲರ ಸಹಾಯ-ಸಹಕಾರ ಸದಾ ಸಂಸ್ಥೆಯ ಜೊತೆಗೆ ಇರಲಿ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಮಹಿಳಾ ಘಟಕದ ಮಾಜಿ ಅಧ್ಯಕ್ಷೆ ಜಯಶ್ರೀ ತಾತನಗೌಡ ಪಾಟೀಲ ಮಾತನಾಡುತ್ತಾ, ಕಳೆದ 4 ವರ್ಷಗಳ ಹಿಂದೆ ರಚನೆಯಾದ ಮಹಿಳಾ ಘಟಕವು ಮಹಿಳೆಯರಿಗೆ ಸಾಕಷ್ಟು ಮಾಹಿತಿ ನೀಡುವಂತಹ ಕಾರ್ಯವನ್ನು ಮಾಡುತ್ತಿದೆ. ಮಹಿಳಾ ಘಟಕದ ಸದಸ್ಯರು ಸಂಸ್ಥೆಯ ಘನತೆ-ಗೌರವಕ್ಕೆ ಯಾವುದೇ ರೀತಿಯಿಂದ ತೊಂದರೆಯಾಗದಂತೆ ನಡೆದುಕೊಳ್ಳಬೇಕು. ಸಂಸ್ಥೆಯು ತನ್ನದೇ ಆದ ಚೌಕಟ್ಟಿನಲ್ಲಿ ಕೆಲಸ ಕಾರ್ಯಗಳನ್ನು ಮಾಡಬೇಕು. ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬನೆಯ ಕಡೆಗೆ ಹೆಚ್ಚಿನ ಒತ್ತು ನೀಡಿ ಎಂದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಮಹಿಳಾ ಘಟಕದ ಅಧ್ಯಕ್ಷೆ ನಂದಾ ಚಂದ್ರು ಬಾಳಿಹಳ್ಳಿಮಠ ವಹಿಸಿದ್ದರು.

ಮಹಿಳಾ ಘಟಕದ ಉಪಾಧ್ಯಕ್ಷರಾದ ಸುಷ್ಮಾ ಎಸ್.ಜಾಲಿ ಸ್ವಾಗತಿಸಿದರು. ಮಹಿಳಾ ಘಟಕದ ಗೌರವ ಕಾರ್ಯದರ್ಶಿಗಳಾದ ಜ್ಯೋತಿ ಆರ್. ದಾನಪ್ಪಗೌಡ್ರ ಕಾರ್ಯಕ್ರಮ ನಿರೂಪಿಸಿದರು. ಮಹಿಳಾ ಘಟಕದ ಮಾಜಿ ಅಧ್ಯಕ್ಷರಾದ ಸುವರ್ಣಾ ಎಸ್. ಮದರಿಮಠ ವಂದಿಸಿದರು.

ಅತಿಥಿ ಉಪನ್ಯಾಸಕರಾಗಿ ಆಗಮಿಸಿದ ಸುಜಯ ಉಮೇಶ ಹುಬ್ಬಳ್ಳಿ ಮಾತನಾಡುತ್ತಾ, ಷೇರು ಮಾರುಕಟ್ಟೆಯಲ್ಲಿ ಹಣ ಹೂಡಿಕೆ ಮಾಡಬೇಕಾದಲ್ಲಿ ಸಾಕಷ್ಟು ಜ್ಞಾನವನ್ನು ಪಡೆದುಕೊಳ್ಳಬೇಕಾಗುತ್ತದೆ. ಜಾಗೃತಿ ವಹಿಸಿ ಷೇರು ಮಾರುಕಟ್ಟೆಯನ್ನು ಪ್ರವೇಶ ಮಾಡಬೇಕು. ಷೇರು ಮಾರುಕಟ್ಟೆಯು ಜಗತ್ತಿನಲ್ಲಿ ಆಗುವ ಬದಲಾವಣೆಯ ಮೇಲೆ ಅವಲಂಬಿತವಾಗಿರುತ್ತದೆ. ಈ ನಿಟ್ಟಿನಲ್ಲಿ ತಾವು ಹೆಚ್ಚು ಹೆಚ್ಚು ಹಣ ತೊಡಗಿಸುವ ಬದಲಾಗಿ ಸಣ್ಣ ಪ್ರಮಾಣದಲ್ಲಿ ಹಣ ಹೂಡಿಕೆ ಮಾಡಬೇಕು ಎಂದು ತಿಳಿಸಿದರು.

# ಎಚ್.ಡಿ. ಕುಮಾರಸ್ವಾಮಿ ಜನ್ಮದಿನ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಹಾಗೂ ಎಲ್ಲಾ ತಾಲೂಕುಗಳ ಪದಾಧಿಕಾರಿಗಳಿಂದ ಗದುಗಿನ ಡಾ. ಶ್ರೀ ಪಂಡಿತ ಪುಟ್ಟರಾಜ ಗವಾಯಿಗಳ ಪುಣ್ಯಶ್ರಮದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಜೆಡಿಎಸ್ ಪಕ್ಷದ ರಾಜ್ಯಾಧ್ಯಕ್ಷ, ಮಾಜಿ ಮುಖ್ಯಮಂತ್ರಿ, ಹಾಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿಯವರ ಜನ್ಮದಿನವನ್ನು ಗದಗ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ ನೇತೃತ್ವದಲ್ಲಿ



ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪಕ್ಷದ ರಾಜ್ಯ ಕಾರ್ಯದರ್ಶಿ ಈರಣ್ಣ ಬಾಳಿಕಾಯಿ, ಜಿಲ್ಲಾ ಪದಾಧಿಕಾರಿಗಳಾದ ಸುಭಾಷ್‌ಚಂದ್ರ ದಾನರೆಡ್ಡಿ, ಗಿರೀಶ ಸಂಶಿ, ಹಾಜಿಅಲಿ ಕೊಪ್ಪಳ, ಎಂ.ಎಸ್. ಪರ್ವತಗೌಡ್ರ, ಲಕ್ಷ್ಮಣ ನಾಯಕ, ಲಕ್ಷ್ಮಣ ಹಳ್ಳಿಕೇರಿ, ಕೆ.ಎಫ್. ದೊಡ್ಡಮನಿ, ಸಂತೋಷ್ ಪಾಟೀಲ, ರಾಜೇಸಾಬ ತಹಸೀಲ್ದಾರ, ಅಲ್ತಾಫ ಖಾಜಿ, ಇಮಾಮಸಾಬ ಉಮಚಗಿ, ಹುಣಸಿಮರದ ಸೇರಿದಂತೆ ಮಂಜುನಾಥ ದೊಡ್ಡಮನಿ, ಸಂಗಪ್ಪ ಎಲಬುಣಸಿ, ಬಾದಶಾಸಾಬ ಬಾಗವಾನ ಮುಂತಾದವರಿದ್ದರು.

# ಬಿಸಿಎ 4ನೇ ಸೆಮಿಸ್ಟರ್ ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಮಹಾವಿದ್ಯಾಲಯದ ಶೈಕ್ಷಣಿಕ ಸಾಲಿನ ಬಿಸಿಎ ಕೋರ್ಸಿನ 4ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳಾದ ವೀಣಾ ಚುಡಗುಂದ (691 ಅಂಕ) ಪ್ರಥಮ ಹಾಗೂ ಸಿಎಂಎ ವಿಷಯದಲ್ಲಿ 100ಕ್ಕೆ 100 ಅಂಕ ಪಡೆದಿದ್ದಾಳೆ. ನೇಹಾ ಕಲಬುರ್ಗಿ (683 ಅಂಕ) ದ್ವಿತೀಯ, ಹೀನಾ ಕೌಸರ್ ದರಗಾದ (668 ಅಂಕ) ತೃತೀಯ, ಶೀಲಾ ಕರಿಯಪ್ಪಗೌಡರ (659 ಅಂಕ) ನಾಲ್ಕನೇ ಸ್ಥಾನ, ಸೃಷ್ಟಿ ಬಿನ್ನಾಳ (658 ಅಂಕ) ಐದನೇ ಸ್ಥಾನ ಪಡೆದಿದ್ದಾರೆ.

ಮಹಾವಿದ್ಯಾಲಯದ ಫಲಿತಾಂಶ 100ಕ್ಕೆ 100ರಷ್ಟು ಆಗಿದ್ದು, ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್. ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಸವಿತಾ ಪೂಜಾರ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ದೌರ್ಜನ್ಯ ನಿಯಂತ್ರಣಾ ಸಮಿತಿಗೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಮಾಜ ಕಲ್ಯಾಣ ಇಲಾಖೆಯ ಎಸ್.ಸಿ./ಎಸ್.ಟಿ. ದೌರ್ಜನ್ಯ ಪ್ರತಿಬಂಧಕ ಕಾಯ್ದೆ 1989ರ ಗದಗ ಜಿಲ್ಲೆ ಜಾಗೃತಿ ಉಸ್ತುವಾರಿ ಸಮಿತಿ ಸದಸ್ಯರಾಗಿ ದಲಿತ ಯುವ ನಾಯಕ ವಿನಾಯಕ ಎಸ್.ಬಳ್ಳಾರಿ ಆಯ್ಕೆಯಾಗಿದ್ದು, ಸಾಮಾಜಿಕ ಸಮಾನತೆಗೆ ಪ್ರಯತ್ನಿಸುತ್ತಿರುವ ನಾಯಕರಿಗೆ ಸಿಕ್ಕ ಗೌರವವಾಗಿದೆ ಎಂದು ಮಾರುತಿ ಗುಡಿಮನಿ, ಬಸವರಾಜ ಕಡೇಮನಿ, ದತ್ತು ಜೋಗಣ್ಣವರ, ಸುರೇಶ ನಂದೆಣ್ಣವರ, ಶರಣು ಪೂಜಾರ, ಸುಭಾಸ ದೊಡ್ಡಮನಿ, ಹನಮಂತ ಬೆಳವಣಕಿ, ಪರಶುರಾಮ ಪೂಜಾರ, ಸತೀಶ ಹುಲಿ, ಶ್ರೀನಿವಾಸ ಗೌಡರ, ಕೃಷ್ಣಾ ಪೂಜಾರ, ಹರೀಶ ಬಾವಿಮನಿ, ಮುತ್ತು ಪೂಜಾರ ಮುಂತಾದವರು ಅಭಿನಂದಿಸಿದ್ದಾರೆ.

## 'ಕ.ವಿ.ವಿ ಬ್ಲೂ' ಆಗಿ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ



ಕಲ್ಯಾಣಸಿರಿ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಬಿ.ಎ. ತೃತೀಯ ಸೆಮಿಸ್ಟರ್ ವಿದ್ಯಾರ್ಥಿ ದೇವೇಂದ್ರಪ್ಪ ಫಕೀರಪ್ಪ ನಿಲುಗಲ್ಲ ಕರ್ನಾಟಕ ವಿಶ್ವವಿದ್ಯಾಲಯದ ಖೊ-ಖೊ ಕ್ರೀಡೆಯಲ್ಲಿ ಸತತ 2ನೇ ಬಾರಿ ಬ್ಲೂ ಆಗಿ ಆಯ್ಕೆಯಾಗಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ.

ಈ ವಿದ್ಯಾರ್ಥಿಯನ್ನು ಸಂಸ್ಥೆಯ ಅಧ್ಯಕ್ಷ ಪ್ರಾ. ಬಿ.ಬಿ. ಗೌಡರ, ಕಾಲೇಜು ಆಡಳಿತ ಮಂಡಳಿಯ ಚೇರಮನ್ ಸೈಯದನೂರುದ್ದಿನ ಮತ್ತು ಎಲ್ಲಾ ಸದಸ್ಯರು, ಕಾಲೇಜಿನ ಕ್ರೀಡಾ ನಿರ್ದೇಶಕ ಪ್ರೊ. ಮಲ್ಲಿಕಾರ್ಜುನ ಕಿರೇಸೂರು, ಕ್ರೀಡಾ ವಿಭಾಗದ ಕಾರ್ಯಾಧ್ಯಕ್ಷ ಪ್ರೊ. ಎಂ.ಎಚ್. ಕುರಿ ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

### ಶರಣ ಸಾಹಿತ್ಯ ಪರಿಷತ್ತಿನ ಸದಸ್ಯರ ಸಭೆಯಲ್ಲಿ ಪ್ರಕಾಶ ಅಸುಂಡಿ ಅಭಿಮತ

# ಶರಣ ಸಾಹಿತ್ಯ ಹೆಚ್ಚು ಪ್ರಸಾರವಾಗಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಶರಣರ ತತ್ವ-ಸಿದ್ಧಾಂತಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ನಮ್ಮ ಪರಿಷತ್ತು ಕಾರ್ಯ ನಿರ್ವಹಿಸುತ್ತಿದೆ. ಆಜೀವ ಸದಸ್ಯರ ಸಂಖ್ಯೆ ಹೆಚ್ಚಾಗಬೇಕು ಹಾಗೂ ದತ್ತಿದಾನಿಗಳು ತಮ್ಮ ಮನೆಯ ಹಿರಿಯರ ಹೆಸರಿನಲ್ಲಿ ಸೇವಾ ಮನೋಭಾವನೆಯಿಂದ ಪರಿಷತ್ತಿಗೆ ದತ್ತಿನಿಧಿ ನೀಡಬೇಕು ಎಂದು ಶರಣ ಸಾಹಿತ್ಯ ಪರಿಷತ್ತಿನ ತಾಲೂಕಾಧ್ಯಕ್ಷ ಪ್ರಕಾಶ ಅಸುಂಡಿ ಅಭಿಪ್ರಾಯಪಟ್ಟರು.

ಗದಗ ತಾಲೂಕಾ ಶರಣ ಸಾಹಿತ್ಯ ಪರಿಷತ್ತು ಹಾಗೂ ತಾಲೂಕಾ ಕದಳಿ ಮಹಿಳಾ ವೇದಿಕೆಯ ಸಹಯೋಗದಲ್ಲಿ ಗದುಗಿನ ತೋಂಟದಾರ್ಯ ಮಠದ ಆವರಣದಲ್ಲಿರುವ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ತಾಲೂಕಿನ ಆಜೀವ ಸದಸ್ಯರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಮಹಾಮನೆ ಪತ್ರಿಕೆಗೆ ಸದಸ್ಯರಾಗುವ ಮೂಲಕ ಉತ್ತಮ ಮೌಲಿಕ ಲೇಖನಗಳ ವಿಚಾರಗಳನ್ನು ಮಹಾಮನೆ ಪತ್ರಿಕೆಯಿಂದ ನಾವೆಲ್ಲರೂ ಪಡೆಯಬಹುದು. ಇಂದಿನ ಯುವ ಜನಾಂಗವನ್ನು ನಮ್ಮ ಪರಿಷತ್ತಿನ ಕಾರ್ಯ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವ ಮೂಲಕ ಶಾಲಾ-ಕಾಲೇಜುಗಳಲ್ಲಿ ತಾಲೂಕಿನ ಗ್ರಾಮಗಳಲ್ಲಿ ಇನ್ನು ಹೆಚ್ಚಿನ ಬಹುಮುಖ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಮೂಲಕ 12ನೇ ಶತಮಾನದ ಶರಣರ ತತ್ವ-ಸಿದ್ಧಾಂತಗಳನ್ನು ಇಂದಿನ ಯುವ




ಜನಾಂಗಕ್ಕೆ ತಲುಪಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ನೂತನವಾಗಿ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಆಯ್ಕೆಯಾದ ಕೆ.ಎ. ಬಳಿಗೇರ ಮಾತನಾಡಿ, ಗದಗ ಜಿಲ್ಲೆಯಲ್ಲಿ ಎಲ್ಲಾ ತಾಲೂಕುಗಳಲ್ಲಿ, ಕ್ರಿಯಾಶೀಲ ಚಟುವಟಿಕೆಗಳು ನಡೆಯಬೇಕು ಹಾಗೂ ತಮ್ಮೆಲ್ಲರ ಸಹಕಾರದ ಮೂಲಕ ಸೇವಾ ಮನೋಭಾವನೆಯಿಂದ ಕಾರ್ಯಪ್ರವೃತ್ತನಾಗುತ್ತೇನೆ. ಜೊತೆಗೆ ಆಜೀವ ಸದಸ್ಯರ ಸಂಖ್ಯೆ ಹೆಚ್ಚಿಸುವಲ್ಲಿ ನಾವೆಲ್ಲರೂ ಗಮನ ಹರಿಸಬೇಕು ಎಂದರು.

ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ್ ಮಾತನಾಡಿ, ಶರಣ ಸಾಹಿತ್ಯ ಪರಿಷತ್ತಿನ ಸಂಘಟನೆ ಕ್ರಿಯಾಶೀಲವಾಗಿದೆ ಹಾಗೂ ಕಾರ್ಯಕ್ರಮ ಆಯೋಜನೆಯಲ್ಲಿ ಹಾಗೂ ಶರಣರತತ್ವ ಸಿದ್ಧಾಂತದ ಪ್ರಚಾರದಲ್ಲಿ ನಾವೆಲ್ಲರೂ ಕೈಜೋಡಿಸುತ್ತೇವೆ ಎಂದರು.

ಜಾಗತಿಕ ಲಿಂಗಾಯತ ಮಹಾಸಭಾದ ಅಧ್ಯಕ್ಷ ಕೆ.ಎಸ್. ಚಟ್ಟಿ ಮಾತನಾಡುತ್ತಾ, ಗದಗ ಜಿಲ್ಲೆಯಲ್ಲಿ ಎಲ್ಲಾ ಸಂಘಟನೆಗಳು ಒಗ್ಗೂಡಿ ಶರಣರ ವಿಚಾರಧಾರೆಯಂತೆ ಕಾರ್ಯನಿರ್ವಹಿಸುತ್ತೇವೆ ಎಂದರು.

ಶಿರಹಟ್ಟಿ ತಾಲೂಕಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ.ಕೆ. ಲಮಾಣಿ ಉಪಸ್ಥಿತರಿದ್ದರು. ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಸುಲೋಚನಾ ಐಹೊಳಿ ಸ್ವಾಗತಿಸಿದರು. ಶರಣೆ ಮಂಜುಳಾ ಹಾಸಿಲಕರ ವಚನ ಪ್ರಾರ್ಥನೆಗೈದರು. ಪ್ರಾಧ್ಯಾಪಕ ಎಸ್. ಯು. ಸಜ್ಜನಶೆಟ್ಟರ ಕಾರ್ಯಕ್ರಮ ನಿರೂಪಿಸಿದರು. ಶರಣ ಎಂ.ಬಿ. ಲಿಂಗದಾಳ ಶರಣು ಸಮರ್ಪಣೆ ಸಲ್ಲಿಸಿದರು. ಸಭೆಯಲ್ಲಿ ರಮಣಶ್ರೀ ಪ್ರಶಸ್ತಿ ಪುರಸ್ಕೃತರಾದ ಗದಗ ಜಿಲ್ಲೆಯ ಡಾ. ಅಂದಯ್ಯ ಅರವಟ್ಟಿಗೆಮಠವರನ್ನು ಪರಿಷತ್ತಿನ ವತಿಯಿಂದ ಗೌರವಿಸಲಾಯಿತು. ಸಭೆಯಲ್ಲಿ ಕದಳಿ ಮಹಿಳಾ ವೇದಿಕೆಯ ತಾಲೂಕಾ ಗೌರವಾಧ್ಯಕ್ಷೆ ರತ್ನಕ್ಕ ಪಾಟೀಲ್, ಶೇಖಣ್ಣ ಕವಳಿಕಾಯಿ, ನಾಗರತ್ನ ಅಸುಂಡಿ, ಮಹಾಂತೇಶ್ ಅಂಗಡಿ, ಶೇಖಣ್ಣ ಕಳಸಾಪುರಶೆಟ್ರು, ನ್ಯಾಯವಾದಿ ಕೆ.ಪಿ. ಕೋಟೆಗೌಡ್ರ, ಅ.ದ. ಕಟ್ಟಿಮನಿ, ಎಸ್.ಎ. ಮುಗದ, ಜಿ.ಪಿ. ಕಟ್ಟಿಮನಿ, ರೇಣುಕಾ ಹಾಸಿಲಕರ, ರಾಜೇಂದ್ರ ಗಡಾದ, ಡಿ.ಎಸ್. ಬಾಪುರೆ, ಶಾಂತಾ ಮುಂದಿನಮನಿ, ಜ್ಯೋತಿ ಹೇರಲಗಿ, ಗೌರಕ್ಕ ಬಡಿಗಣ್ಣನವರ, ಪ್ರಾ. ಎನ್.ಪಿ. ಪವಾಡಿಗೌಡ್ರ, ಎಂ.ಆರ್. ಚನ್ನಪ್ಪಗೌಡ್ರ, ಎಸ್.ಜಿ. ಹಂಚಿನಾಳ, ಸಂಗಮೇಶ ಹಾದಿಮನಿ, ಬಸವರಾಜ ಶೆಲಿಯಪ್ಪನವರ, ಉಮಾ ಗದಗ, ಅಕ್ಕಮಹಾದೇವಿ ಗದಗ, ಗುರುದೇವಿ ಗದಗ ಮುಂತಾದವರಿದ್ದರು.

ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ಪ್ರಸ್ತಾವಿಕವಾಗಿ ಮಾತನಾಡುತ್ತಾ, ಶರಣ ಸಾಹಿತ್ಯ ಪರಿಷತ್ತಿನ ಒಂದು ಭಾಗವಾಗಿ ಕದಳಿ ಮಹಿಳಾ ವೇದಿಕೆಯು ಗದಗ ಜಿಲ್ಲೆಯಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ಜಿಲ್ಲೆಯ ಏಳು ತಾಲೂಕುಗಳಲ್ಲಿ ಶರಣರ ವಿಚಾರಧಾರೆಗಳನ್ನು ಅರ್ಥಪೂರ್ಣ ಕಾರ್ಯಕ್ರಮಗಳ ಮೂಲಕ ಜನ ಮಾನಸಕ್ಕೆ ತಲುಪಿಸುವ ಕೆಲಸ ನಡೆಯುತ್ತಿದೆ ಎಂದರು.

### ಎಸ್‌ಕೆಆರ್‌ಕೆ ಸರ್ಕಾರಿ ಪ್ರೌಢಶಾಲೆಯಲ್ಲಿ ಅಪರಾಧ ತಡೆ ಮಾಸಾಚರಣೆ

# ಅಪರಾಧಗಳನ್ನು ಮುಚ್ಚಿಡುವುದೂ ಅಪರಾಧ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಮ್ಮ ಸುತ್ತಲೂ ಘಟಿಸುತ್ತಿರುವ ಅನೇಕ ದುರ್ಘಟನೆಗಳನ್ನು ಕಂಡೂ ಕಾಣದಂತಿರುತ್ತೀರಿ. ಇಲ್ಲದ ಉಸಾಬರಿ ನಮಗೇಕೆ ಬೇಕು ಎಂದು ಉದಾಸೀನ ಮನೋಭಾವ ತೇ-ೂರುತ್ತೀರಿ. ಇದರಿಂದ ಅಪರಾಧಗಳ ಸಂಖ್ಯೆ ಹೆಚ್ಚಾಗುವುದರ ಜೊತೆಗೆ ಅಪರಾಧಿಗಳು ಪಾರಾಗುತ್ತಾರೆ. ಇದನ್ನು ತಪ್ಪಿಸಬೇಕಾದರೆ ನಿಮ್ಮ ಸಹಕಾರ ಅತ್ಯಗತ್ಯ ಎಂದು ನರೇಗಲ್ಲ ಪೊಲೀಸ್ ಠಾಣೆಯ ಪಿಎಸ್‌ಐ ಐಶ್ವರ್ಯ ನಾಗರಾಳ ಹೇಳಿದರು. ಪಟ್ಟಣದ ಎಸ್‌ಕೆಆರ್‌ಕೆ ಸರ್ಕಾರಿ ಪ್ರೌಢಶಾಲೆಯಲ್ಲಿ ಅಪರಾಧ ತಡೆ ಮಾಸಾಚರಣೆ ಅಂಗವಾಗಿ ನರೇಗಲ್ಲ ಪೊಲೀಸ್ ಇಲಾಖೆಯಿಂದ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಪ್ರಸ್ತುತ ಸಮಾಜದಲ್ಲಿ ಸಂಭವಿಸುತ್ತಿರುವ ಘಟನೆಗಳ ಬಗ್ಗೆ ಮುಂಜಾಗ್ರತೆ ವಹಿಸಿದರೆ




ನಡೆಯುತ್ತಿರುವ ಅಪರಾಧಗಳನ್ನು ತಡೆಗಟ್ಟಲು ಸಾಧ್ಯ. ಕಂಡೂ ಕಾಣದಂತೆ ಹೋಗುವುದು ಅಪರಾಧಗಳನ್ನು ಮತ್ತು ಅಪರಾಧಿಗಳನ್ನು ಪ್ರೋತ್ಸಾಹಿಸಿದಂತೆ ಎಂದರು.

ಮನೆಯಲ್ಲಿ ಒಂಟಿಯಾಗಿರುವಾಗ ಮುಂಬಾಗಿಲು ಹಾಕಿಕೊಂಡು ಕೆಲಸ ಮಾಡಬೇಕು. ಯಾರಾದರೂ ಮನೆ ಬಾಗಿಲು ತಟ್ಟಿದಾಗ, ಬೆಲ್ ಮಾಡಿದಾಗ ತಕ್ಷಣ ಬಾಗಿಲು ತೆ-ರೆಯದೆ ಕಿಟಕಿಯಿಂದ ನೋಡಿ ಖಚಿತಪಡಿಸಿಕೊಂಡ ನಂತರ ವ್ಯವಹರಿಸಬೇಕು. ಅಪರಿಚಿತರು ಮನೆ ಬಳಿ ಬಂದು ನೀರು, ವಿಳಾಸ ಇತ್ಯಾದಿ ಕೇಳಲು ಬಂದಾಗ ಜಾಗ್ರತೆಯಿಂದ ವರ್ತಿಸಬೇಕು. ಕಿಟಕಿ ಮತ್ತು ಬಾಗಿಲು ಪಕ್ಕ ಬೆಲೆಬಾಳುವ ವಸ್ತುಗಳನ್ನು ಇಡಬಾರದು. ನಿಮ್ಮ ಸಂಪತ್ತು ಅಪರಾಧಗಳಿಗೆ ಪ್ರಚೋದನೆ ನೀಡದಿರಲಿ. ಮೈ ಮೇಲೆ ಒಡವೆಗಳನ್ನು ಧರಿಸಿ ತಿರುಗಾಡುವ ಪರಿಪಾಠವನ್ನು ಆದಷ್ಟು ತಪ್ಪಿಸಿ. ಅಪರಾಧಗಳ ಬಗ್ಗೆ ಜನರಿಗೆ ಜಾಗೃತಿ ಮೂಡಿಸುವುದು, ಅಪರಾಧಗಳು ಆಗದಂತೆ ತಡೆಯಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅರಿವು ಮೂಡಿಸಲು ಅಪರಾಧ ತಡೆ ಮಾಸಾಚರಣೆ ಆಚರಿಸಲಾಗುತ್ತಿದೆ ಎಂದರು. ಚಿ

ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕ ಎಸ್.ಬಿ. ನಿಡಗುಂದಿ, ಜೆ.ಎಂ. ಜೋಶಿ, ಎಂ.ವಿ. ಜಾಧವ, ಬಿ.ಟಿ. ತಾಳಿ, ಮಾರ್ತಾಂಡ ಉಪ್ಪಾರ ಸೇರಿದಂತೆ ಪೊಲೀಸ್ ಸಿಬ್ಬಂದಿ ಹಾಗೂ ಶಾಲೆಯ ಸಿಬ್ಬಂದಿಗಳು ಇದ್ದರು.

ಅಪರಾಧ ಮಾಡುವುದು ಎಷ್ಟು ತಪ್ಪೋ, ಅಪರಾಧಗಳನ್ನು ಮುಚ್ಚಿಡುವುದೂ ಸಹ ಅಷ್ಟೇ ತಪ್ಪು. ಕೇವಲ ಪೊಲೀಸರಿಂದ ಅಪರಾಧಗಳ ತಡೆ ಸಾಧ್ಯವಿಲ್ಲ. ಸಾರ್ವಜನಿಕರ ಸಹಕಾರವೂ ಮುಖ್ಯವಾಗಿರುತ್ತದೆ. ಕಿಡಿಗೇಡಿಗಳು ನಿಮಗೇನಾದರೂ ಕಿರುಕುಳ ನೀಡಿದರೆ ನಿಮ್ಮ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು ಎಂದು ಪಿಎಸ್‌ಐ ಐಶ್ವರ್ಯ ನಾಗರಾಳ ತಿಳಿಸಿದರು.

# ಬಹುಭಾಷಾ ಕವಿಗೋಷ್ಠಿಗೆ ತಿಪ್ಪಾನಾಯ್ಕ್ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಡಿ. 20, 21 ಮತ್ತು 22ರಂದು ಮಂಡ್ಯದಲ್ಲಿ ನಡೆಯುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ತಾಲೂಕಿನ ಶಿಗ್ಲಿ ಗ್ರಾಮದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯ ಶಿಕ್ಷಕ, ಕವಿ, ತಿಪ್ಪಾನಾಯ್ಕ ಎಲ್ ಆಯ್ಕೆಯಾಗಿದ್ದಾರೆ.

ಸಮ್ಮೇಳನದಲ್ಲಿ ಡಿ. 22ರಂದು ನಡೆಯಲಿರುವ ಬಹುಭಾಷಾ ಕವಿಗೋಷ್ಠಿಯಲ್ಲಿ ಲಂಬಾಣಿ ಭಾಷೆಯಲ್ಲಿ ತಮ್ಮ ಕವಿತೆ ಪ್ರಸ್ತುತಪಡಿಸಲಿದ್ದಾರೆ. ಮೂಲತಃ ವಿಜಯನಗರ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ನಾಗಲಾಪುರ (ತಾಂಡಾ)ದ ತಿಪ್ಪಾನಾಯ್ಕ ಸದ್ಯ ಶಿಗ್ಲಿ ಗ್ರಾಮದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಇವರು ಕರ್ನಾಟಕ ರಾಜ್ಯ ಪಠ್ಯಪುಸ್ತಕ ರಚನಾ ಸಮಿತಿಯ ನಲಿ-ಕಲಿ ಭಾಗದ ರಾಜ್ಯ ಸಂಪನ್ಮೂಲ ವ್ಯಕ್ತಿಯಾಗಿ, ಅಂತರ್ ಜಿಲ್ಲಾ ವಿಷಯಾಧಾರಿತ ತರಬೇತುದಾರರಾಗಿ, ವ್ಯಕ್ತಿತ್ವ ವಿಕಸನ ಶಿಬಿರ, ಕಲಿಕಾ ಸಾಮಗ್ರಿಗಳ ತಯಾರಿಕೆಯ ರಾಜ್ಯ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದಾರೆ.

ರಾಜ್ಯದ 17 ಪಠ್ಯ-ಪುಸ್ತಕಗಳ ರಚನೆಯಲ್ಲಿ ಕಾರ್ಯನಿರ್ವಹಿಸಿದ್ದಾರೆ. ವೈಜ್ಞಾನಿಕ ಮನೋಭಾವ ಮೂಡಿಸುವ ಕಾರ್ಯಾಗಾರಗಳನ್ನು ನಡೆಸುತ್ತಿರುವ ಇವರು ಸದ್ಯ ಮೂರು ಕೃತಿಗಳನ್ನು ರಚಿಸಿದ್ದು, ಬಿಡುಗಡೆ ಹಂತದಲ್ಲಿವೆ. ಇವರ ಆಯ್ಕೆ ಸಂತಸ ಮೂಡಿಸಿದ್ದು, ತಾಲೂಕಿನ ಎಲ್ಲಾ ಶಿಕ್ಷಕರು, ಕನ್ನಡಾಭಿಮಾನಿಗಳು, ಸಾಹಿತಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

ಹಿಂಗಾರಿನ ಬೆಳೆಗಳ ಕ್ಷಿಪ್ರ ಸಂಚಾರ ಸಮೀಕ್ಷೆ ಸಂದರ್ಭದಲ್ಲಿ ಸ್ಫೂರ್ತಿ ಜಿ.ಎಸ್ ಮಾಹಿತಿ

# ಬೆಳೆ ಬದಲಾವಣೆ ಕ್ರಮಗಳನ್ನು ಅನುಸರಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರು ಪ್ರತಿ ವರ್ಷ ಒಂದೇ ಬೆಳೆಯ ಬದಲಾಗಿ ಬೆಳೆ ಪರಿವರ್ತನಾ ಪದ್ಧತಿ ಅನುಸರಿಸುವುದರಿಂದ ರೋಗಬಾಧೆ ತಡೆಗಟ್ಟುವದರೊಂದಿಗೆ ಮಣ್ಣಿನ ಫಲವತ್ತತೆ ಹೆಚ್ಚಿಸಿ ರೋಗಮುಕ್ತ ಮತ್ತು ಉತ್ತಮ ಇಳುವರಿ ಪಡೆಯಬಹುದಾಗಿದೆ ಎಂದು ಉಪಕೃಷಿ ನಿರ್ದೇಶಕರಾದ ಸ್ಫೂರ್ತಿ ಜಿ.ಎಸ್ ಹೇಳಿದರು.

ಅವರು ಬುಧವಾರ ಲಕ್ಷ್ಮೇಶ್ವರ ತಾಲೂಕಿನ ಯಳವತ್ತಿ, ಗೊಜನೂರ, ಲಕ್ಷ್ಮೇಶ್ವರ ಭಾಗದಲ್ಲಿ ಹಿಂಗಾರಿ ಹಂಗಾಮಿನ ಬೆಳೆಗಳಿಗೆ ತಗುಲುವ ಕೀಟ ಮತ್ತು ರೋಗಗಳ ಬಗ್ಗೆ ಸಮೀಕ್ಷಾ ಕಾರ್ಯ ನಡೆಸಿ ಹತೋಟಿ ಮತ್ತು ಮುಂಜಾಗೃತೆಗಾಗಿ ರೈತರಿಗೆ ತಿಳುವಳಿಕೆ ನೀಡುವ ನಿಟ್ಟನಲ್ಲಿ ಕೃಷಿ ಇಲಾಖೆ, ಕೃಷಿ ಸಂಶೋಧನಾ ಕೇಂದ್ರ ಹಾಗೂ ಕೃಷಿ ವಿಜ್ಞಾನ ಕೇಂದ್ರದ ಸಹಯೋಗದೊಂದಿಗೆ ಆರಂಭಿಸಿದ ಹಿಂಗಾರಿನ ಬೆಳೆಗಳ ಕ್ಷಿಪ್ರ ಸಂಚಾರ ಸಮೀಕ್ಷೆ ಕೈಗೊಂಡ ಸಂದರ್ಭದಲ್ಲಿ ರೈತರೊಂದಿಗೆ ಮಾತನಾಡಿದರು.

ಮಣ್ಣಿನಲ್ಲಿ ಸೇರಿಕೊಂಡಿರುವ ಶಿಲೀಂದ್ರಗಳಿಂದ ಉಂಟಾಗುವ ಬೆಳೆ ಸೊರಗು ರೋಗಬಾಧೆ ನಿಯಂತ್ರಣ ಕಷ್ಟಸಾಧ್ಯ. ಅದಕ್ಕಾಗಿ ರೈತರು ಮಾಗಿ ಉಳುಮೆ, ಮಣ್ಣು ಪರೀಕ್ಷೆ, ಬೀಜೋಪಚಾರ, ಬೆಳೆ ಬದಲಾವಣೆಯಂತಹ ಕ್ರಮಗಳನ್ನು ಅನುಸರಿಸಬೇಕು ಎಂದರು.

ಲಕ್ಷ್ಮೇಶ್ವರದಲ್ಲಿ ರೈತ ಕೆಂಚನಗೌಡ ಪಾಟೀಲ




ಅವರ ಕಡಲೆ ಬೆಳೆ ಕಾಯಿಕಟ್ಟುವ ಪೂರ್ವ (2 ತಿಂಗಳು)ದಲ್ಲಿಯೇ ಸಿಡಿ/ನೆಟೆರೋಗಕ್ಕೆ ಒಣಗಿ ಸಂಪೂರ್ಣ ಬೆಳೆ ಹಾಳಾಗಿರುವುದನ್ನು ವೀಕ್ಷಣೆಗೆ ಹೋದಾಗ ರೈತರು ಬಿತ್ತನೆ ಪೂರ್ವಲ್ಲಿಯೇ ರೈತರಿಗೆ ತಿಳುವಳಿಕೆ, ಜಾಗೃತಿ ಕಾರ್ಯಕ್ರಮ ಮಾಡಬೇಕು. ಈ ವರ್ಷ ಬೀಜೋಪಚಾರ ಸೇರಿ ಮುಂಜಾಗೃತಾ ಕ್ರಮದಿಂದ ಬಿತ್ತನೆ ಮಾಡಿದರೂ ಅಕಾಲಿಕ ಮಳೆ, ಫೆಂಗಲ್ ಚಂಡಮಾರುತದಿಂದ ಬಹುತೇಕ ರೈತರ ಕಡಲೆ ಬೆಳೆ ರೋಗಕ್ಕೆ ತುತ್ತಾಗಿದೆ. ಆದ್ದರಿಂದ ಇದೊಂದು ವಿಶೇಷ ಪ್ರಕರಣವೆಂದು ಪರಿಹಾರ ಕಲ್ಪಿಸಬೇಕು ಎಂದರು.

ಇದಕ್ಕೆ ಪ್ರತಿಕ್ರಿಯಿಸಿದ ಅಧಿಕಾರಿಗಳು, ಎನ್‌ಡಿಆರ್‌ಎಫ್/ಎಸ್‌ಡಿಆರ್‌ಎಫ್ ಯೋಜನೆಯಡಿ ಅತಿವೃಷ್ಟಿ ಮತ್ತು ಅನಾವೃಷ್ಟಿಗೆ ಮಾತ್ರ ಪರಿಹಾರ ಕಲ್ಪಿಸಬಹುದಾಗಿದೆ. ಆದರೆ ಲಕ್ಷ್ಮೇಶ್ವರ ತಾಲೂಕಿನ ಅನೇಕ ಕಡೆ ಮಾತ್ರ ಹೆಚ್ಚು ಪ್ರಮಾಣದಲ್ಲಿ ಕಡಲೆಗೆ ನೆಟೆ/ಸಿಡಿ ರೋಗ ಆವರಿಸಿದೆ. ಈ ಬಗ್ಗೆ ವರದಿಯನ್ನು ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗುವುದು. ರೈತರಿಗೆ ಹಿಂಗಾರಿ ಬೆಳೆಗಳಲ್ಲಿ ಕೀಟ, ರೋಗಬಾಧೆ ನಿಯಂತ್ರಣದ ಬಗ್ಗೆ ತಿಳುವಳಿಕೆ ನೀಡುವ ನಿಟ್ಟನಲ್ಲಿ ಇಲಾಖೆ ಅನೇಕ ಕಾರ್ಯಕ್ರಮ ಮಾಡುತ್ತೇವೆ. ಇನ್ನೊಂದು ವಾರದಲ್ಲಿ ಲಕ್ಷ್ಮೇಶ್ವರ ಭಾಗದಲ್ಲಿ ಜಾಗೃತಿ ಕಾರ್ಯಕ್ರಮ ಮಾಡಲಾಗುವುದು ಎಂದರು.

ಗದಗ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಸಸ್ಯ ಕೀಟಶಾಸ್ತ್ರಜ್ಞ ಡಾ. ಸಿ.ಎಮ್. ರಫಿ ಮಾತನಾಡಿ, 3ರಿಂದ 5 ವರ್ಷ ಬೆಳೆ ಪರಿವರ್ತನೆ ಮಾಡಬೇಕು.

> ಕಡಲೆ ಬೆಳೆ ಗದಗ ಜಿಲ್ಲೆಯ ಹಿಂಗಾರಿನ ಸಾಂಪ್ರದಾಯಿಕ ಬೆಳೆಯಾಗಿದೆ. ಅನೇಕ ರೈತರು ಪ್ರತಿ ವರ್ಷ ಹಿಂಗಾರಿನಲ್ಲಿ ಕಡಲೆಯನ್ನೇ ಪ್ರಮುಖವಾಗಿ ಬೆಳೆಯುತ್ತಾರೆ. ಬೆಳೆ ಬದಲಾವಣೆಯಾಗದ್ದರಿಂದ ಮಣ್ಣಿನಲ್ಲಿ ಸೇರಿಕೊಂಡಿರುವ ಶಿಲೀಂದ್ರನಾಶಕಗಳು, ಇತ್ತೀಚೆಗೆ ಸುರಿದ ಅಕಾಲಿಕ ಮಳೆ ಮತ್ತು ಹವಾಮಾನ ವೈಪರಿತ್ಯದಿಂದ ಬೆಳೆ ಒಣಗಲು ಪೂರಕ ವಾತಾವರಣ ಸೃಷ್ಟಿಯಾದಂತಾಗಿದೆ ಎಂದು ಡಾ. ಸಿ.ಎಮ್. ರಫಿ ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ತೊಗರಿ ಲಾಭದಾಯಕವಾಗಿದ್ದು, ಪರ್ಯಾಯ ಬೆಳೆಯಾಗಿ ತೊಗರಿ ಬೆಳೆಯಬೇಕು. ಹಿಂಗಾರಿನಲ್ಲಿ ಜೋಳ, ಗೋದಿ, ಕುಸುಬೆ, ಹೊಸ ತಳಿಯ ಕಡಲೆಯನ್ನು ಬೀಜೋಪಚಾರದಂತಹ ಮುಂಜಾಗೃತಾ ಕ್ರಮದೊಂದಿಗೆ ಬಿತ್ತನೆ ಮಾಡಬೇಕು ಎಂದರು.

ಸಹಾಯಕ ಕೃಷಿ ನಿರ್ದೇಶಕರಾದ ಮಲ್ಲಯ್ಯ ಕೊರವನವರ, ಪ್ರಾಣೇಶ, ರೇವಣಪ್ಪ ಮನಗೂಳಿ, ಮೇಘನಾ ನಾಡಿಗೇರ, ಅಣ್ಣಿಗೇರಿ ಕೃಷಿ ಸಂಶೋಧನಾ ಕೇಂದ್ರದ ಕೃಷಿ ತಳಿ ಶಾಸ್ತ್ರಜ್ಞ ಡಾ. ಮೋಟಗಿ, ಅಣ್ಣಿಗೇರಿ ಕೃಷಿ ಸಂಶೋಧನಾ ಕೇಂದ್ರದ ಬೇಸಾಯ ಶಾಸ್ತ್ರಜ್ಞ ಡಾ.ಸಂಗಶೆಟ್ಟಿ ಬಾಲಕುಂದೆ, ಸಸ್ಯ ರೋಗ ಶಾಸ್ತ್ರಜ್ಞ ಡಾ.ಶಿವಲಿಂಗಪ್ಪ ಹೋಟ್ಕರ, ಪಿ.ಕೆ. ಹೊನ್ನಪ್ಪನವರ ಸೇರಿ ಕೃಷಿ ಇಲಾಖೆಯ ಕ್ಷೇತ್ರ ಮಟ್ಟದ ಅಧಿಕಾರಿಗಳು, ರೈತರಾದ ವಿರೂಪಾಕ್ಷ ಆದಿ ಮುಂತಾದವರು ಪಾಲ್ಗೊಂಡಿದ್ದರು.

# ತೆರಿಗೆ ವಸೂಲಿ ಅಭಿಯಾನದಲ್ಲಿ ರೋಣ ತಾ.ಪಂ ದಾಖಲೆ




▶▶ ಮೊದಲನೇ ಪುಟದಿಂದ

ಈ ಅಭಿಯಾನದಲ್ಲಿ ಮೆಣಸಗಿ, ಹೊಸಳ್ಳಿ, ಮಲ್ಲಾಪೂರ, ಕುರಹಟ್ಟಿ ಗ್ರಾ.ಪಂಗಳು ಶೇ.100ರಷ್ಟು ಪ್ರಗತಿ ಸಾಧಿಸಿ ವಿಶೇಷ ಗಮನ ಸೆಳೆದಿವೆ.

ಒಂದು ತಿಂಗಳು ಕಾಲ ತಾಲೂಕಿನಲ್ಲಿ ವಿಶೇಷ ಕರ ವಸೂಲಿ ಅಭಿಯಾನದಲ್ಲಿ ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಪಿಡಿಒ, ಕಾರ್ಯದರ್ಶಿಗಳು, ಬಿಲ್ ಕಲೆಕ್ಟರ್, ಡಿಇಒ, ವಾಟರ್ ಮ್ಯಾನ್‌ಗಳು, ಜಿಕೆಎಂ, ಸೇರಿದಂತೆ ಗ್ರಾಮ ಪಂಚಾಯಿತಿಯ ಎಲ್ಲಾ ಸಿಬ್ಬಂದಿಗಳನ್ನು ಬಳಕೆ ಮಾಡಿಕೊಂಡು ತೆರಿಗೆ ಸಂಗ್ರಹಣೆ ಮಾಡಲಾಯಿತು.

ತಾ.ಪಂ ಸಭಾಂಗಣದಲ್ಲಿ ನಡೆದ ಪ್ರಶಸ್ತಿ ವಿತರಣಾ ಕಾರ್ಯಕ್ರಮದಲ್ಲಿ ಸಹಾಯಕ ನಿರ್ದೇಶಕ (ಪಂ.ರಾ) ರೀಯಾಜ್ ಖತೀಬ್, ತಾ.ಪಂ ವ್ಯವಸ್ಥಾಪಕರಾದ ದೇವರಾಜ್ ಸಜ್ಜನಶೆಟ್ಟರ, ಸಹಾಯಕ ಲೆಕ್ಕಾಧಿಕಾರಿ ಅನಿಲಕುಮಾರ ಬೇವಿನಮರದ ಸೇರಿದಂತೆ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಬಿಲ್ ಕಲೆಕ್ಟರ್, ಡಿಇಒ, ತಾ.ಪಂ ಸಿಬ್ಬಂದಿಗಳು ಹಾಗೂ ನರೇಗಾ ಸಿಬ್ಬಂದಿಗಳು ಹಾಜರಿದ್ದರು.

# ನಾಮನಿರ್ದೇಶಿತ ಸದಸ್ಯರಾಗಿ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಮಾಜ ಕಲ್ಯಾಣ ಇಲಾಖೆಯ ಎಸ್.ಸಿ./ಎಸ್.ಟಿ. ದೌರ್ಜನ್ಯ ಪ್ರತಿಬಂಧಕ ಕಾಯ್ದೆ 1989 ಗದಗ ಜಿಲ್ಲೆ ಜಾಗೃತಿ ಉಸ್ತುವಾರಿ ಸಮಿತಿ ನಾಮ ನಿರ್ದೇಶಿತ ಸದಸ್ಯರಾಗಿ ಸಾಮಾಜಿಕ ಕಾರ್ಯಕರ್ತ ಪ್ರೊ. ಸಂಗಮೇಶ ಹಾದಿಮನಿ ಆಯ್ಕೆಯಾಗಿದ್ದಾರೆ.

ಸಂವಿಧಾನ ಶಿಲ್ಪಿ ಡಾ ಬಿ. ಅರ್. ಅಂಬೇಡ್ಕರವರ ತತ್ವ – ಸಿದ್ಧಾಂತಗಳನ್ನು



ಅಳವಡಿಸಿಕೊಂಡು ಸಾಮಾಜಿಕ ಸಂಘಟನೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಹಾದಿಮನಿಯವರನ್ನು ಆಯ್ಕೆ ಮಾಡಿರುವುದು ಅವರಿಗೆ ಸಂದ ಗೌರವ ಎಂದು ಗದಗ ಜಿಲ್ಲಾ ಅಂಬಿಗರ ಸಮಾಜದ ಜಿಲ್ಲಾಧ್ಯಕ್ಷ ರಾಮಣ್ಣ ಇರಕಲ್ಲ, ನಿಜ ಶರಣ ಅಂಬಿಗರ ಚೌಡಯ್ಯ ವಿವಿಧೋದ್ದೇಶಗಳ ಉಪಾಧ್ಯಕ್ಷ ಗುರಪ್ಪ ತಿರ್ಲಾಪೂರ, ರಾಷ್ಟ್ರೀಯ ಮೀನುಗಾರರ ತಾಲೂಕಾಧ್ಯಕ್ಷ ಹರೀಶ ಬಾರಕೇರ, ಮಂಜುನಾಥ ಗುಡಿಸಾಗರ, ರವಿಕುಮಾರ ಗುಡಿಸಾಗರ, ರಾಜು ಪೂಜಾರ, ಪ್ರವೀಣ ನೀಲಣ್ಣವರ, ಬಸವಪ್ರಭು ಹಾದಿಮನಿ, ಬಸವರಾಜ ಕ್ಯಾರಕೊಪ್ಪ ಹಾಗೂ ಗೆಳೆಯರ ಬಳಗದವರು ಅಭಿನಂದಿಸಿದ್ದಾರೆ.

# ಐಸ್ಕ್ರೀಮ್ ವ್ಯಾಪಾರಸ್ಥರ ಸಂಘದ ಉದ್ಘಾಟನೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ತಂಪು ಪಾನೀಯ, ಜ್ಯೂಸ್ ತಯಾರಕರ ಹಾಗೂ ಐಸ್ಕ್ರೀಮ್ ವ್ಯಾಪಾರಸ್ಥರ ವಿವಿಧೋದ್ದೇಶಗಳ ಸಂಘದ ಉದ್ಘಾಟನಾ ಸಮಾರಂಭವನ್ನು ಡಿ. 20ರಂದು ಮುಂಜಾನೆ 11 ಗಂಟೆಗೆ ಗದುಗಿನ ದಾಸರ ಓಣಿಯ ಶಾಂತಾರಾಮ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.



ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿ ಪೂಜ್ಯ ಮಹೇಶ್ವರ ಸ್ವಾಮಿಜಿ ಹೊಸಳ್ಳಿಮಠ ಅವರು ಉದ್ಘಾಟನೆ ನೆರವೇರಿಸಿ ಸಮಾರಂಭದ ಸಾನ್ನಿಧ್ಯ ವಹಿಸುವರು. ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆಯ ಅಂಕಿತ ಅಧಿಕಾರಿ ಡಾ. ವಿಜಯ ಕಂಠಿ, ಗದಗ ಎಸ್.ಎಸ್.ಕೆ ಪಂಚ ಕಮಿಟಿಯ ಅಧ್ಯಕ್ಷ ಫಕ್ಕೀರಸಾ ಭಾಂಡಗೆ, ನಗರ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹಾಗೂ ಎಸ್.ಎಸ್.ಕೆ ಪಂಚ ಕಮಿಟಿಯ ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಪಾಟೀಲ ಆಗಮಿಸುವರು.

ಸಂಘದ ಅಧ್ಯಕ್ಷ ಗಂಟುಸಾ (ಗಣೇಶ) ಹಬೀಬ, ಉಪಾಧ್ಯಕ್ಷ ಮಾಧುಸಾ ಪವಾರ, ಪ್ರಧಾನ ಕಾರ್ಯದರ್ಶಿ ಶಂಕರಸಾ ಪವಾರ, ಸ.ಗೌ ಕಾರ್ಯದರ್ಶಿ ನಂದು ಬೇವಿನಕಟ್ಟಿ, ಖಜಾಂಚಿ ಲುಕ್ಕಣಸಾ ರಾಜೋಳಿ, ನಿರ್ದೇಶಕರಾದ ಯಲ್ಲೂಸಾ ಹಬೀಬ, ರವೀಂದ್ರಸಾ ಪವಾರ, ಈಶ್ವರಪ್ಪ ಪರಕಾಳಿ, ಮೋತಿಲಾಲ ಕಬಾಡಿ, ಮಂಜುನಾಥ ಕಂದೊಳ್ಳಿ, ಸತೀಶ ದೇವಳೆ ಉಪಸ್ಥಿತರಿರುವರು ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಶಂಕರಸಾ ಪವಾರ ತಿಳಿಸಿದ್ದಾರೆ.

# ನಾಳೆ ಪೂರ್ವ ಸಿದ್ಧತಾ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇದೇ ಡಿಸೆಂಬರ್ 29 ರಂದು ಆಚರಿಸಲಾಗುತ್ತಿರುವ ವಿಶ್ವಮಾನವ ದಿನಾಚರಣೆ ನಿಮಿತ್ತ ಡಿ. 20 ರಂದು ಮಧ್ಯಾಹ್ನ 3 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ತಾವು ಸಭೆಗೆ ಆಗಮಿಸಿ ಸಲಹೆ, ಅಭಿಪ್ರಾಯ ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಭಾ ಕಾರಂಜಿಯಲ್ಲಿ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಹೊಸಳ್ಳಿ ಬೂದೀಶ್ವರ ವಿದ್ಯಾಪೀಠದಲ್ಲಿ ಇತ್ತೀಚೆಗೆ ನಡೆದ ತಾಲೂಕಾ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಚಿಕ್ಕಹಂದಿಗೋಳದ ಸ.ಹಿ.ಪ್ರಾ. ಶಾಲೆಯ ವಿದ್ಯಾರ್ಥಿಗಳಾದ ಈರಪ್ಪ ಇಂಗಳಹಳ್ಳಿ ಆಶುಭಾಷಣದಲ್ಲಿ ಪ್ರಥಮ, ಸೃಷ್ಟಿ ವಿರಕ್ತಮಠ ಧಾರ್ಮಿಕ ಪಠಣದಲ್ಲಿ ಪ್ರಥಮ, ಧೃವ ಕಮ್ಮಾರ ಕ್ಲೇಮಾಡೆಲಿಂಗ್‌ನಲ್ಲಿ ಪ್ರಥಮ ಹಾಗೂ ಲಲಿತಾ ಗೌಡರ ಅಭಿನಯ ಗೀತೆಯಲ್ಲಿ ದ್ವಿತೀಯ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ ಶಾಲೆಯ ಪ್ರಧಾನಗುರುಗಳು, ಶಿಕ್ಷಕರು, ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷರು, ಸರ್ವ ಸದಸ್ಯರು ಹಾಗೂ ಗ್ರಾಮದ ಗುರು-ಹಿರಿಯರು ಅಭಿನಂದಿಸಿದ್ದಾರೆ.

## ಕರ್ನಾಟಕ ಧನವಿನಿಯೋಗ ವಿಧೇಯಕ ಪರಿಷತ್ ನಲ್ಲಿ ಅಂಗೀಕಾರ

ಬೆಳಗಾವಿ ಸುವರ್ಣಸೌಧ 18. ವಿಧಾನಸಭೆಯಿಂದ ಅಂಗಿಕೃತ ರೂಪದಲ್ಲಿರುವ ಕರ್ನಾಟಕ ಧನ ವಿನಿಯೋಗ(ಸಂಖ್ಯೆ –5) ವಿಧೇಯಕ 2024 ಡಿ.18 ರಂದು ವಿಧಾನ ಪರಿಷತ್ತಿನಲ್ಲಿ ಅಂಗೀಕೃತವಾಯಿತು.


ಕರ್ನಾಟಕ ಸರಕಾರ

**ಪುರಸಭೆ ಕಾರ್ಯಾಲಯ, ಲಕ್ಷ್ಮೇಶ್ವರ**

ತಾ: ಲಕ್ಷ್ಮೇಶ್ವರ ಜಿ:ಗದಗ

e-mail: itstaff_ulb_laxmeshwar@yahoo.co.in

Website:www.lakmishwaratown.mrc.gov.in

Phone:08487-272916 Fax no:08487-272916

ಕಂ/ಪುಸಲ/ತಾಂ.ವಿ/ಪು.ನಿಧಿ/ಇ-ಟೆಂಡರ್/ವಹಿ/2024-25 ದಿ: 17-12-2024

**ಅಲ್ಪಾವಧಿ ಟೆಂಡರ್ ಪ್ರಕಟಣೆ (ಇ-ಪ್ರೋಕ್ಯೂರಮೆಂಟ್ ಮೂಲಕ)**

ಲಕ್ಷ್ಮೇಶ್ವರ ಪುರಸಭೆ ವ್ಯಾಪ್ತಿಯ 1ರಿಂದ 23 ವಾರ್ಡಗಳಲ್ಲಿ ಬರುವತಂಹ ವಿದ್ಯುತ ಬೀದಿ ದೀಪಗಳ ಹಾಗೂ ವಿವಿಧ ವ್ಯಾಸದ ಮೋಟರ ರೀವೈಂಡಿ, ಪೇನೆಲ ಬೋರ್ಡ ರಿಪೇರಿ, ವಾರ್ಷಿಕ ನಿರ್ವಹಣೆ ಮಾಡುವ ಕುರಿತು ಪುರಸಭೆ ನಿಧಿಯಲ್ಲಿ ಒಟ್ಟು 2 ಕಾಮಗಾರಿ ಅಂದಾಜು ಮೊತ್ತ ರೂ 43.00 ಲಕ್ಷಗಳಿಗೆ ಕೆ.ಟಿ.ಟಿ.ಪಿ ಕಾಯ್ದೆ ಅಧಿನಿಯಮ 2000 ರನ್ವಯ ಈ ಕೆಳಗಿನಂತೆ ಇಂಡಂಟ್‌ಗಳಲ್ಲಿ ಇ ಟೆಂಡರಗಳನ್ನು ಆಹ್ವಾನಿಸಿದ್ದು ಅರ್ಹ ಬಿಡ್‌ದಾರರು ಟೆಂಡರನ್ನು ಇ-ಪ್ರೋಕ್ಯೂರಮೆಂಟ್ ಪೋರ್ಟಲ್ https://kppp.karnataka.gov.in ಠೇವಣಿ (ಇಎಂಡಿ) ಮತ್ತು ಟೆಂಡರ ಫೀಯನ್ನು ಇ-ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ ಸೂಚಿಸಿದಂತೆ ಪಾವತಿಸಿ ಭಾಗವಹಿಸಬಹುದಾಗಿದೆ. ಟೆಂಡರ ಸಲ್ಲಿಸುವ ಕೊನೆಯ ದಿನಾಂಕ: 27-12-2024 ರ ಸಂಜೆ 4.00 ಗಂಟೆಯವರೆಗೆ ಟೆಂಡರ ದಿನಾಂಕಗಳನ್ನು ನಿಗಧಿಪಡಿಸಲಾಗಿದೆ. ಹಾಗೂ ಟೆಂಡರಗೆ ಸಂಬಂಧಿಸಿದ ಯಾವುದೆ ಬದಲಾವಣೆಗಳು ಅಥವಾ ತಿದ್ದುಪಡಿಗಳನ್ನು E-portal ನಲ್ಲಿ ಪ್ರಕಟಿಸಲಾಗುವುದು.

| ಅ. ನಂ | ಕಾಮಗಾರಿಯ ಇಂಡಂಟ್ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | DMA/2024-25/SE4223 | 14.00 |
| 2 | DMA/2024-25/SE4126 | 29.00 |

ಸಹಿ/- ಮುಖ್ಯಾಧಿಕಾರಿಗಳು (ಶ್ರೀ ಮಹೇಶ ಎಸ್ ಹಡಪದ) ಪುರಸಭೆ, ಲಕ್ಷ್ಮೇಶ್ವರ

ಸಹಿ/- ಅಧ್ಯಕ್ಷರು (ಶ್ರೀಮತಿ ಯಲ್ಲವ್ವ ಗಂ ದುರಗಣ್ಣವರ) ಪುರಸಭೆ, ಲಕ್ಷ್ಮೇಶ್ವರ

ವಾ.ಸಾ.ಇ/ಗದಗ/465/ದೇಶಪಾಂಡೆಪಬ್ಲಿಸಿಟಿ/2024-25



**ಗ್ರಾಮ ಪಂಚಾಯತ,ಕಾರ್ಯಾಲಯ ಬಾಲೇಹೊಸೂರ,**

ತಾಲೂಕ :-ಲಕ್ಷ್ಮೇಶ್ವರ ಜಿಲ್ಲಾ:-ಗದಗ

ಸಂ.ಗ್ರಾ.ಪಬಾ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ:-19/12/2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬಾಲೇಹೊಸೂರ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರ್ಮ ಬೆಲೆ (ರೂ.ಗಳಲ್ಲಿ) |
|---|---|---|---|
| 1 | ಬಾ ಗ್ರಾ ಹೇಮಣ್ಣ ಹನುಮರಡ್ಡಿ ಇವರ ಹೊಲದಿಂದ ಕಂಠೆಪ್ಪ ರೊಡ್ಡನವರ ಹೊಲದವರೆಗೆ ರಸ್ತೆ ಅಭಿವೃದ್ಧಿ ಪಡಿಸುವದು | 136976 | 500 |
| 2 | ಬಾ ಗ್ರಾ ಮಲ್ಲೇಶ ಹುಲ್ಲೂರ ಇವರ ಹೊಲದಿಂದ ನಾಗಪ್ಪ ಹಾವೇರಿ ಹೊಲದವರೆಗೆ ರಸ್ತೆ ಅಭೀವೃದ್ಧಿ ಪಡಿಸುವದು. | 152913 | 500 |
| 3 | ಬಾ ಗ್ರಾ ದೇವಪ್ಪ ಮಟ್ಟಿ ಮನೆಯಿಂದ ಹನುಮಂತಪ್ಪ ವಗ್ಗಣ್ಣವರ ಮನೆಯಿಂದ ಮೊರಂ ರಸ್ತೆ ನಿರ್ಮಾಣ | 221973 | 1000 |
| 4 | ಬಾಲೇಹೊಸೂರ ಗ್ರಾಮದ ಅಣ್ಣಪ್ಪ ಗುಡಗೇರಿ ಮನೆಯಿಂದ ಗೊಪಾಲರಾವ್ ಕುಬೇರ ಇವರ ಹೊಲದವರೆಗೆ ತಡಗೊಡೆ ನಿರ್ಮಾಣ. | 205722 | 1000 |
| 5 | ಬಾ ಗ್ರಾ ರಾಚಪ್ಪ ಕಮ್ಮಾರ ಇವರ ಹೊಲದಿಂದ ಚಿಪ್ಪನ ಭಿಮಣ್ಣ ಇವರ ಹೊಲದವರೆಗೆ ಮೊರಂ ಹಾಕುವದು | 109581 | 500 |

**ಷರಾ: ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು.**

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ಸ್ವಿಕರಿಸುವ ದಿನಾಂಕ: **19/12/2024** ರಿಂದ **26/12/2024** ರವರೆಗೆ. ಖಾಲಿ ದರಪಟ್ಟಿ ಫಾರ್ಮ ನೀಡುವ ದಿನಾಂಕ: **26-12-2024**, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವಿಕರಿಸುವ ದಿನಾಂಕ: **26-12-2024 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30** ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ: **26-12-2024ರ ಮಧ್ಯಾಹ್ನ 3.00 ಗಂಟೆ**

**ನಿಬಂಧನೆಗಳು:** 1)ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಬಾಲೇಹೊಸೂರ ಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ಬಾಲೇಹೊಸೂರ

ಸಹಿ/- ಅಧ್ಯಕ್ಷರು ಗ್ರಾಮ ಪಂಚಾಯತಿ ಬಾಲೇಹೊಸೂರ

ವಾ.ಸಾ.ಇ/ಗದಗ/469/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka